# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
04 ಎಪ್ರಿಲ್ । ಗುರುವಾರ
04 APRIL 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 40 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ಬೆಂಗಳೂರು ಹೈಕೋರ್ಟ್ನಲ್ಲಿ ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿ



ಬೆಂಗಳೂರು: ಹೈಕೋರ್ಟ್ ನಲ್ಲಿ ವ್ಯಕ್ತಿಯೊಬ್ಬರು ಆತ್ಮಹತ್ಯೆಗೆ ಯತ್ನಿಸಿದ ಘಟನೆ ಇಂದು ನಡೆದಿದೆ.

ಮೈಸೂರು ಮೂಲದ ಶ್ರೀನಿವಾಸ್(51) ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿ. ಮುಖ್ಯ ನ್ಯಾಯಾಧೀಶರ ಪೀಠ ಇರುವ ಕೋರ್ಟ್ ಹಾಲ್ 1ರ ಬಳಿ ಚಾಕುವಿನಿಂದ ಕತ್ತು ಕೊಯ್ದುಕೊಂಡು ಶ್ರೀನಿವಾಸ್ ಆತ್ಮಹತ್ಯೆಗೆ ಯತ್ನಿಸಿದ್ದಾರೆ.

ತಕ್ಷಣವೇ ಪೊಲೀಸರು ಶ್ರೀನಿವಾಸ್ ಅವರನ್ನು ರಕ್ಷಿಸಿ ಬೌರಿಂಗ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಪೊಲೀಸರು ಈಗ ಶ್ರೀನಿವಾಸ್‌ಗೆ ಸಂಬಂಧಿಸಿದಂತೆ ಪೂರ್ವಾಪರ ಮಾಹಿತಿಯನ್ನು ಕಲೆ ಹಾಕುತ್ತಿದ್ದಾರೆ.




## ಗುಂಡಿನ ಚಕಮಕಿ: 13 ಉಗ್ರರ ಹತ್ಯೆ

ಛತ್ತೀಸ್‌ಗಢ: ಬಿಜಾಪುರದಲ್ಲಿ ಎಂದು ಗಂಟೆಗಳ ಕಾಲ ಭದ್ರತಾ ಪಡೆಗಳು ಹಾಗೂ ನಕ್ಸಲರ ನಡುವೆ ಎನ್‌ಕೌಂಟರ್ ನಡೆದಿದ್ದು, 13 ನಕ್ಸಲರನ್ನು ಹತ್ಯೆ ಮಾಡಲಾಗಿದೆ. ಸಿಬ್ಬಂದಿಯ ಜಂಟಿ ತಂಡವು ಲೆಂಡಾ ಗ್ರಾಮದ ಅರಣ್ಯದಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆ ನಡೆಸುತ್ತಿದ್ದಾಗ ಎನ್‌ಕೌಂಟರ್ ನಡೆದಿದೆ.

ಇತ್ತೀಚಿನ ವರ್ಷಗಳಲ್ಲಿ ಇದು ಅತ್ಯಂತ ದೊಡ್ಡ ಭದ್ರತಾ ಕಾರ್ಯಾಚರಣೆಗಳಲ್ಲಿ ಒಂದಾಗಿದೆ ಎಂದು ಪರಿಗಣಿಸಲಾಗಿದೆ. ಬುಧವಾರ ಬೆಳಗ್ಗೆಯ ಹೊತ್ತಿಗೆ ಒಟ್ಟು 13 ಮೃತದೇಹಗಳನ್ನು ಸಿಬ್ಬಂದಿಗಳು ಹೊರತೆಗೆದಿದ್ದಾರೆ.

ಜಿಲ್ಲಾ ಮೀಸಲು ಪಡೆ, ವಿಶೇಷ ಕಾರ್ಯಪಡೆ, ಕೇಂದ್ರೀಯ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಮತ್ತು ಕಮಾಂಡೋ ಬೆಟಾಲಿಯನ್ ಫಾರ್ ರೆಸಲ್ಯೂಟ್ ಆಕ್ಷನ್ (ಕೋಬ್ರಾ) ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ.

## ವಯನಾಡಿನಲ್ಲಿಂದು ರಾಹುಲ್ ಗಾಂಧಿ ನಾಮಪತ್ರ ಸಲ್ಲಿಕೆ



ಕೇರಳ: ಕೇರಳದ ವಯನಾಡಿನ ಕಾಂಗ್ರೆಸ್ ಸಂಸದ ಮತ್ತು ಪಕ್ಷದ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರು 2024ರ ಲೋಕಸಭೆ ಚುನಾವಣೆಗೆ ಬುಧವಾರ ವಯನಾಡಿನಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ.

ಮತ್ತೆ ಅದೇ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸಿದ್ದಾರೆ. ನಾಮಪತ್ರ ಸಲ್ಲಿಕೆಗೂ ಮುನ್ನ ಅವರು ವಯನಾಡ್‌ನಲ್ಲಿ ರೋಡ್ ಶೋ ನಡೆಸಿ ಸಂಜೆಯ ವೇಳೆಗೆ ದೆಹಲಿಗೆ ಹಿಂದಿರುಗಲಿದ್ದಾರೆ.

ಮಾಜಿ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ ಅವರ ಪುತ್ರ ರಾಹುಲ್ ಗಾಂಧಿ ಅವರು ಈ ಸಾರ್ವತ್ರಿಕ ಚುನಾವಣೆಯಲ್ಲಿ ಸಿಪಿಐ ಪ್ರಧಾನ ಕಾರ್ಯದರ್ಶಿ ಡಿ ರಾಜಾ ಅವರ ಪತ್ನಿ ಮತ್ತು ಸಿಪಿಐ ಅಭ್ಯರ್ಥಿ ಅನ್ನಿ ರಾಜಾ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಕೆ ಸುರೇಂದ್ರನ್ ವಿರುದ್ಧ ಸ್ಪರ್ಧಿಸುತ್ತಿದ್ದಾರೆ.

ಈ ಕ್ಷೇತ್ರದಲ್ಲಿ ಮೂವರ ನಡುವೆ ಜಿದ್ದಾಜಿದ್ದಿನ ಪೈಪೋಟಿ ಏರ್ಪಡಲಿದೆ ಎಂದು ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ. ಆದಾಗ್ಯೂ, ಅನ್ನಿ ರಾಜಾ ಮತ್ತು ಕೆ ಸುರೇಂದ್ರನ್‌ಗಿಂತ ರಾಹುಲ್ ಗಾಂಧಿ ಹೆಚ್ಚು ಜನಪ್ರಿಯ ಮುಖ ಎಂದೇ ಹೇಳಬಹುದು.

ಕೇರಳದಲ್ಲಿ ಚುನಾವಣೆ ಯಾವಾಗ?: ಕೇರಳದಲ್ಲಿ ಎರಡನೇ ಹಂತದ ಚುನಾವಣೆಗೆ ಏಪ್ರಿಲ್ 26 ರಂದು ಮತದಾನ ನಡೆಯಲಿದ್ದು, ಜೂನ್ 4 ರಂದು ಫಲಿತಾಂಶ ಪ್ರಕಟವಾಗಲಿದೆ.

ಅಂದ ಹಾಗೆ, 2019ರ ಸಾರ್ವತ್ರಿಕ ಚುನಾವಣೆಯಲ್ಲಿ ರಾಹುಲ್ ಗಾಂಧಿ 4.31 ಲಕ್ಷ ಮತಗಳ ಅಂತರದಿಂದ ಗೆದ್ದಿದ್ದರು.

ರಾಹುಲ್ ಗಾಂಧಿ ಉತ್ತರ ಪ್ರದೇಶದ ಅಮೇಥಿ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ಸ್ಮೃತಿ ಇರಾನಿ ವಿರುದ್ಧ ಸೋಲು ಅನುಭವಿಸಿದ್ದರು. ರಾಹುಲ್ ಗಾಂಧಿ ಅವರು 2004, 2009 ಮತ್ತು 2014 ರಲ್ಲಿ ಅಮೇಥಿ ಕ್ಷೇತ್ರದಿಂದ ಲೋಕಸಭೆ ಚುನಾವಣೆಯಲ್ಲಿ ಗೆದ್ದಿದ್ದರು.

## ಲೋಕಸಭೆ ಚುನಾವಣೆ: ಸಿಎಂ, ಡಿಸಿಎಂ, ಸಚಿವರಿಂದ ರೋಡ್ ಶೋ



ಚಾಮರಾಜನಗರ: ಚಾಮರಾಜನಗರ ಲೋಕಸಭೆ ಕ್ಷೇತ್ರದಿಂದ ಎರಡು ಬಾರಿ ಆರ್. ಧ್ರುವನಾರಾಯಣ ಎಂಪಿ ಆಗಿದ್ದರು. ಮೂರನೇ ಬಾರಿ ಕೆಲವೇ ಮತಗಳ ಅಂತರದಲ್ಲಿ ಸೋತಿದ್ದರು. ಇಂದು ಅವರು ನಮ್ಮ ಜೊತೆಗಿಲ್ಲ. ಆದರೆ, ಅವರ ಸ್ಥಾನದಲ್ಲಿ ಸುನೀಲ್ ಬೋಸ್ ಅವರು ಇದ್ದು ಅವರನ್ನು ಎಲ್ಲಾ ಮತದಾರರು ಬೆಂಬಲಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಮನವಿ ಮಾಡಿದರು.

ಚಾಮರಾಜನಗರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಪರ ಭರ್ಜರಿ ರೋಡ್ ಶೋ ನಡೆಸಿ ಮಾತನಾಡಿದ ಅವರು, ಎಂಟು ವಿಧಾನಸಭಾ ಕ್ಷೇತ್ರದಲ್ಲಿ 7 ಕಡೆ ನಮ್ಮ ಶಾಸಕರಿದ್ದಾರೆ. ಈ ಬಾರಿ ಹನೂರು ಕ್ಷೇತ್ರದಲ್ಲಿ ಬಹುಮತ ಕೊಡಿಸುವುದಾಗಿ ಆರ್. ನರೇಂದ್ರ ಭರವಸೆ ನೀಡಿದ್ದಾರೆ. 2 ಲಕ್ಷ ಮತಗಳ ಅಂತರದಿಂದ ಸುನೀಲ್ ಬೋಸ್ ಗೆಲುವು ಸಾಧಿಸಲಿದ್ದಾರೆ ಎಂದರು.

ಬಿಜೆಪಿ ಸರ್ಕಾರ ಹತ್ತು ವರ್ಷ ಕೇಂದ್ರದಲ್ಲಿದ್ದರೂ ಕೊಟ್ಟ ಮಾತನ್ನು ಈಡೇರಿಸಿಲ್ಲ. ಮೋದಿ ಸುಳ್ಳನ್ನು ಹೇಳಿ ಜನರನ್ನು ವಂಚಿಸಿದ್ದಾರೆ. ಕಳೆದ ಬಾರಿ ಸಿಎಂ ಆಗಿದ್ದಾಗಲೂ ಈಗ ಸಿಎಂ ಆದ ಮೇಲೂ ಎಲ್ಲ ಭರವಸೆಗಳನ್ನು ಈಡೇರೆಸಿದ್ದು, ಐದು ಗ್ಯಾರೆಂಟಿಗಳನ್ನು ಕೊಟ್ಟಿದ್ದೀನಿ ಎಂದರು.

ಮೋದಿ ಹೇಳಿದ 15 ಲಕ್ಷ ಖಾತೆಗೆ, ಉದ್ಯೋಗ ಸೃಷ್ಟಿ, ಪೆಟ್ರೋಲ್, ಡಿಸೆಲ್, ಗ್ಯಾಸ್ ಬೆಲೆ ಇಳಿಕೆಯಾಯಿತಾ, ಅವರಿಗೆ ಓಟ್ ಹಾಕಬೇಕಾ ಎಂದು ಪ್ರಶ್ನಿಸಿ, ಕೇಂದ್ರ ಸಂಪೂರ್ಣವಾಗಿ ವೈಫಲ್ಯ ಕಂಡಿದೆ. ಅದರ ಬಗ್ಗೆ ಜನರಿಗೆ ತಿಳಿಸಿ, ಅದರೊಂದಿಗೆ ನಮ್ಮ ಗ್ಯಾರಂಟಿ ಗಳನ್ನು ತಿಳಿಸಿ ಎಂದು ಹೇಳಿದರು. ಬರ ಪರಿಹಾರಕ್ಕೆ ವರದಿ ನೀಡಿಲ್ಲ ಎಂದು ಅಮಿತ್ ಶಾ ಸುಳ್ಳು ಹೇಳುತ್ತಿದ್ದಾರೆ. ನಾನೇ ಸ್ವತಃ ಪ್ರಧಾನಿ ಅವರನ್ನು ಭೇಟಿ ಮಾಡಿ ರೈತರ ಕಷ್ಟದ ಬಗ್ಗೆ ತಿಳಿಸಿದ್ದೇನೆ ಎಂದರು.

ಬರಗಾಲವನ್ನು ನಮ್ಮ ಸಂಪನ್ಮೂಲಗಳಿಂದ ಎದುರಿಸುತ್ತಿದ್ದೇವೆ. ಕೇಂದ್ರದಿಂದ ಒಂದು ರೂ. ಬಂದಿಲ್ಲ. ಬಿಜೆಪಿಯನ್ನು ಸೋಲಿಸಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿ ಎಂದ ಅವರು 3 ಲಕ್ಷ ಮತಗಳ ಅಂತರದಿಂದ ಗೆಲ್ಲಿಸಿ ಎಂದು ಮನವಿ ಮಾಡಿ, ನಮ್ಮ ಗೆಲುವು ನೂರಕ್ಕೆ ನೂರು ಗ್ಯಾರೆಂಟಿ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ, ಡಾ.ಜಿ ಪರಮೇಶ್ವರ್, ಕೆ.ವೆಂಕಟೇಶ್, ಸತೀಶ್, ಜಾರಕಿಹೋಳಿ, ಡಾ.ಎಚ್ .ಸಿ ಮಹದೇವಪ್ಪ, ಯತೀಂದ್ರ, ಶಾಸಕ ಪುಟ್ಟರಂಗಶೆಟ್ಟಿ, ಎಆರ್ ಕೃಷ್ಣಮೂರ್ತಿ ಸೇರಿದಂತೆ ಇತರ ನಾಯಕರ ರೋಡ್ ಶೋ ನಲ್ಲಿ ಭಾಗವಹಿಸಿದ್ದರು. ಸಾವಿರಾರು ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

## ಬಿಜೆಪಿ ಅಜೆಂಡಾ ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿದೆ: ಜಿ.ಪರಮೇಶ್ವರ್



ಕೊರಟಗೆರೆ: ಕರ್ನಾಟಕ ಸೇರಿದಂತೆ ಬಿಜೆಪಿ ಪಕ್ಷ ಅಧಿಕಾರ ಕಳೆದುಕೊಂಡಿರುವ ರಾಜ್ಯಗಳ ಮೇಲೆ ಕೇಂದ್ರ ಸರ್ಕಾರವು ಮಲತಾಯಿ ಧೋರಣೆ ತೋರುತ್ತಿದೆ ಇದು ಪ್ರಜಾ ಪ್ರಭುತ್ವಕ್ಕೆ ವಿರುದ್ಧವಾದ ಅಜೆಂಡಾವಾಗಿದೆ' ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆರೋಪಿಸಿದರು.

ಪಟ್ಟಣದ ರಾಜೀವ ಭವನದಲ್ಲಿ ಪಕ್ಷದ ವಿವಿಧ ಪದಾಧಿಕಾರಿಗಳು ಹಾಗೂ ಮುಖಂಡರ ಜೊತೆ ಸಭೆ ನಡೆಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ರಾಜ್ಯಕ್ಕೆ ಬರ ಪರಿಹಾರ ಅನುದಾನ ಹಂಚಿಕೆವಿಚಾರ ಹಾಗೂ ಯೋಜನೆ ನೀಡುವುದರಲ್ಲಿ ಕೇಂದ್ರ ಸರ್ಕಾರ ತಾರತಮ್ಯ ಮಾಡುತ್ತಿದೆ ' ಎಂದು ಹೇಳಿದರು.

'ದೇಶದಲ್ಲಿ ಒಕ್ಕೂಟ ಪ್ರಜಾಪ್ರಭುತ್ವ ವ್ಯವಸ್ಥೆ ಇದೆ ಎಂಬುದನ್ನು ಕೇಂದ್ರ ಸರ್ಕಾರ ಮರೆತಿದೆ.

ರಾಜ್ಯದಲ್ಲಿ ಭೀಕರ ಬರಗಾಲವಿದ್ದರೂ ಜನರ ಸಂಕಷ್ಟಕ್ಕೆ ಈವರೆಗೂ ಸ್ಪಂದಿಸಿಲ್ಲ, ಅನುದಾನ ನಿಡುವಂತೆ ಸುಪ್ರೀಂ ಕೋರ್ಟ್ ಮೊರೆ ಹೋಗಬೇಕಾದ ಪರಿಸ್ಥಿತಿ ಬಂದಿದೆ. ಇದು ಒಳ್ಳೆಯ ಬೆಳವಣಿಗೆಯಲ್ಲ.

ಜನರು ಬಿಜೆಪಿ ಪಕ್ಷವನ್ನು ತಿರಸ್ಕರಿಸಲಿದ್ದಾರೆ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿ ನಾಯಕರು ಆಡುವ ಮಾತುಗಳು ಗಮನಿಸಿದರೆ ದೇಶದ ಪ್ರಜಾಪ್ರಭುತ್ವಕ್ಕೆ ಅಪಾಯವಿದೆ ಎನಿಸುತ್ತದೆ, ಒಂದು ದೇಶ ಒಂದು ಚುನಾವಣೆ ಮುಂದಾಗಿದ್ದು ಸಂವಿಧಾನ ಬದಲಾಯಿಸಲು ಪ್ರಾರಂಭಿಸಿದ್ದಾರೆ' ಎಂದು ಆರೋಪಿಸಿದರು.

## ಸಂವಿಧಾನ ಬದಲಾಯಿಸಲು ಯಾರಿಂದಲೂ ಸಾಧ್ಯವಿಲ್ಲ: ದೇವೇಂದ್ರ ಫಡ್ನವಿಸ್



ಮುಂಬೈ: ಸಂವಿಧಾನವನ್ನು ಬದಲಾಯಿಸಲು ಅಥವಾ ನಾಗರಿಕರಿಗೆ ಒದಗಿಸಲಾದ ಹಕ್ಕುಗಳನ್ನು ಮೊಟಕುಗೊಳಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ಹಾಗೂ ಭಾರತೀಯ ಜನತಾ ಪಕ್ಷದ ನಾಯಕ ದೇವೇಂದ್ರ ಫಡ್ನವಿಸ್ ಬುಧವಾರ ಹೇಳಿದ್ದಾರೆ.

ಪೂರ್ವ ಮಹಾರಾಷ್ಟ್ರದ ಅಕೋಲಾ ಲೋಕಸಭಾ ಸ್ಥಾನಕ್ಕೆ ಬಿಜೆಪಿ ಅಭ್ಯರ್ಥಿ ಅನುಪ್ ಧೋತ್ರೆ ನಾಮಪತ್ರ ಸಲ್ಲಿಸುವ ಮುನ್ನ ನಡೆದ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಫಡ್ನವೀಸ್, 'ಸಂವಿಧಾನ ನೀಡಿರುವ ಹಕ್ಕುಗಳಿಂದಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಉನ್ನತ ಹುದ್ದೆಗೆ ತಲುಪಿದ್ದಾರೆ.

ಕೇಸರಿ ಪಡೆ ಸಂವಿಧಾನವನ್ನು ಬದಲಾಯಿಸಲು ಪ್ರಯತ್ನಿಸುತ್ತಿದೆ ಎಂದು ವಿಪಕ್ಷಗಳು ಆಗಾಗ್ಗೆ ಆರೋಪಿಸುತ್ತಿವೆ. ಆದರೆ ಈ ನಿರೂಪಣೆಗೆ ಯಾವುದೇ ಆಧಾರವಿಲ್ಲ. ಚಂದ್ರ, ಸೂರ್ಯ ಮತ್ತು ನಕ್ಷತ್ರಗಳು ಇರುವವರೆಗೆ ಯಾರೂ ಸಂವಿಧಾನವನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.

ಸಮಾಜ ಸುಧಾರಕ, ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಗೆಲ್ಲಲು ಚುನಾಯಿತರಾಗಲು ಎಂದಿಗೂ ಅನುಮತಿಸಲಿಲ್ಲ ಮತ್ತು ಅಕೋಲಾ ಲೋಕಸಭಾ ಕ್ಷೇತ್ರದಿಂದ ವಂಚಿತ್ ಬಹುಜನ ಆಘಾಡಿ ಅಭ್ಯರ್ಥಿಯಾಗಿರುವ ಅವರ ಮೊಮ್ಮಗ ಪ್ರಕಾಶ್ ಅಂಬೇಡ್ಕರ್ ಅವರೊಂದಿಗೆ ಕಾಂಗ್ರೆಸ್ ಪಕ್ಷವು ಈಗ ಅದೇ ರೀತಿ ಮಾಡುತ್ತದೆ ಎಂದು ಫಡ್ನವಿಸ್ ಕಿಡಿಕಾರಿದರು.

ಬಿಜೆಪಿ ಪ್ರಧಾನಿ ಮೋದಿಯವರಿಗೆ ಮತ ಕೇಳುತ್ತಿದೆ, ಅವರ ಅಧಿಕಾರಾವಧಿಯಲ್ಲಿ 25 ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಮತ್ತು ಭಾರತವು ವಿಶ್ವದ ಐದನೇ ಅತಿದೊಡ್ಡ ಆರ್ಥಿಕತೆಯಾಗಿದೆ ಎಂದು ಅವರು ಹೇಳಿದರು.

## ಸುಳ್ಳು ಹೇಳುವುದರಲ್ಲಿ ಪ್ರಧಾನಿ ಮೋದಿ ನಂಬರ್ ಒನ್: ಶಾಸಕ ಸವದಿ ವ್ಯಂಗ್ಯ



ಬೆಳಗಾವಿ: ದೇಶದಲ್ಲಿ 10 ವರ್ಷಗಳಿಂದ ಆಡಳಿತ ನಡೆಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ದೇಶದ ಜನರಿಗೆ ಸುಳ್ಳು ಆಶ್ವಾಸನೆಗಳನ್ನು ನೀಡಿ, ಜನರ ಕಣ್ಣಿಗೆ ಮಂಕುಬೂದಿ ಎರಚುವ ಮೂಲಕ ಅಧಿಕಾರಕ್ಕೆ ಬಂದಿದ್ದಾರೆ. ಸುಳ್ಳು ಹೇಳುವುದರಲ್ಲಿ ಪ್ರಧಾನಿ ಮೋದಿ ನಂಬರ್ ಒನ್ ಎಂದು ಮಾಜಿ ಡಿಸಿಎಂ, ಶಾಸಕ ಲಕ್ಷ್ಮಣ ಸವದಿ ವ್ಯಂಗ್ಯವಾಡಿದರು.

ಅಥಣಿ ಪಟ್ಟಣದ ಪುರಸಭೆ ಕಾಂಪ್ಲೆಕ್ಸ್ ನಲ್ಲಿ ಕಾಂಗ್ರೆಸ್ ಪಕ್ಷದ ಜನ ಸಂಪರ್ಕ ಕಾರ್ಯಾಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾನು ಕಳೆದ 25 ವರ್ಷಗಳಿಂದ ಬಿಜೆಪಿ ಪಕ್ಷದಲ್ಲಿದ್ದು, ಅಲ್ಲಿನ ಮುಖಂಡರ ತಂತ್ರಗಾರಿಕೆ ಬಗ್ಗೆ ನನಗೆ ಅರಿವಿದೆ. ಒಂದು ಸುಳ್ಳನ್ನು ಅನೇಕ ಬಾರಿ ಹೇಳುವ ಮೂಲಕ ಅದನ್ನೇ ಸತ್ಯ ಎಂದು ಬಿಂಬಿಸುತ್ತಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬಂದ ನಂತರ ದೇಶದ ಜನರು ಅನೇಕ ನಿರೀಕ್ಷೆಗಳನ್ನು ಹೊಂದಿದ್ದರು. ಬಡ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಪೆಟ್ರೋಲ್, ಡಿಸೈಲ್, ಗ್ಯಾಸ್ ಬೆಲೆ ಕಡಿಮೆ ಮಾಡುತ್ತೇವೆ. ದೇಶದ ಎಲ್ಲೆಡೆ ಬುಲೆಟ್ ಟ್ರೈನ್, ತಾಲೂಕ ಕೇಂದ್ರಗಳಲ್ಲಿ ವಿಮಾನ ನಿಲ್ದಾಣ ಮಾಡುವುದಾಗಿ ಸೋಶಿಯಲ್ ಮೀಡಿಯಾಗಳನ್ನು ಬಳಸಿಕೊಂಡು ಪ್ರಚಾರ ಪಡೆದುಕೊಂಡರು ಎಂದರು.

ಆದರೆ ಕಳೆದ ಹತ್ತು ವರ್ಷಗಳಲ್ಲಿ ನಿರೀಕ್ಷೆ ಪ್ರಮಾಣದ ಪ್ರಗತಿ ಕಾಣಲಿಲ್ಲ. ಕನಿಷ್ಠ ಪಕ್ಷ ನದಿಗಳ ಜೋಡಣೆ ಮಾಡುತ್ತೀವಿ ಎನ್ನುವ ಆಶ್ವಾಸನೆ ಕೂಡ ಈಡೇರಲಿಲ್ಲ. ಬಿಜೆಪಿ ಅನೇಕ ಸುಳ್ಳುಗಳನ್ನು ಸತ್ಯ ಎಂದು ಬಿಂಬಿಸಿ ದೇಶದ ಜನರಿಗೆ ಮೋಸ ಮಾಡುತ್ತಿದ್ದಾರೆ. ಲೋಕಸಭಾ ಚುನಾವಣಾ ಈ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಪ್ರತಿಯೊಬ್ಬ ಮತದಾರರಿಗೆ ಮನವರಿಕೆ ಮಾಡುವ ಮೂಲಕ ನಮ್ಮ ಪಕ್ಷದ ಅಧಿಕೃತ ಅಭ್ಯರ್ಥಿ ಕು. ಪ್ರಿಯಾಂಕ ಸತೀಶ್ ಜಾರಕಿಹೊಳಿ ಅವರನ್ನು ಗೆಲ್ಲಿಸುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಸದಾಶಿವ ಬುಟಾಳಿ, ಗಜಾನನ ಮಂಗಸೂಳಿ ,ಅಸ್ಲಂ ನಾಲಬಂದ ,ಬಸವರಾಜ ಗುಮಟಿ, ರಮೇಶ ಸಿಂದಗಿ, ಅಥಣಿ ಬ್ಲಾಕ್ ಅಧ್ಯಕ್ಷ ಸಿದ್ದಾರ್ಥ ಶಿಂಗೆ, ಬಾಬು ಖೇಮಲಾಪೂರ ,ಸುರೇಶ ಮಾಯಣ್ಣವರ ,ಶಾಂತಿನಾಥ ನಂದೇಶ್ವರ, ರಾಮನಗೌಡ ಪಾಟೀಲ, ತೆಲಸಂಗ ಬ್ಲಾಕ್ ಅಧ್ಯಕ್ಷ ಅಮೋಘಸಿದ್ಧ ಕೊಬ್ಬರಿ,ಪುರಸಭಾ ಸದಸ್ಯ ರಾವಸಾಬ ಐಹೊಳೆ, ವಿಲೀನ ಯಲಮಲ್ಲೇ, ರವಿ ಬಡಕಂಬಿ ಅನೇಕರು ಉಪಸ್ಥಿತರಿದ್ದರು.

## ಬಸ್ ನಿಲ್ದಾಣದಲ್ಲಿ ನೇಣಿಗೆ ಶರಣಾದ ರೈತ

ವಿಜಯಪುರ: ಸಾಲಬಾಧೆಯಿಂದ ಮನನೊಂದು ರೈತರೊಬ್ಬರು ಬಸ್ ನಿಲ್ದಾಣದಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಬಸವನಬಾಗೇವಾಡಿ ತಾಲೂಕಿನ ಹೂವಿನಹಿಪ್ಪರಗಿ ಬಸ್ ನಿಲ್ದಾಣದಲ್ಲಿ ನಡೆದಿದೆ.

ನೇಣಿಗೆ ಶರಣಾದ ರೈತರನ್ನು ಭೀಮಪ್ಪ ಡೋಣೂರ (76) ಎಂದು ಗುರುತಿಸಲಾಗಿದೆ. ಬಸವನಬಾಗೇಬಾಡಿ ತಾಲೂಕಿನ ಹುಣಸ್ಯಾಳ ಗ್ರಾಮದ ರೈತ ಭೀಮಪ್ಪ ಹೂವಿನಹಿಪ್ಪರಗಿ ಬಸ್ ನಿಲ್ದಾಣದ ಆವರಣದಲ್ಲಿ ಕಬ್ಬಿಣದ ಸರಳಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಖಾಸಗಿಯಾಗಿ ಲಕ್ಷಾಂತರ ರೂ. ಸಾಲ ಮಾಡಿಕೊಂಡಿದ್ದ ಭೀಮಪ್ಪ ಸಾಲ ಮರುಪಾವತಿ ಮಾಡಲಾಗದೇ ನೊಂದಿದ್ದ. ಇದರಿಂದಾಗಿ ಖಿನ್ನತೆಗೆ ಒಳಗಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಕುಟುಂಬದವರು ಹೇಳಿದ್ದಾರೆ.ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿರುವ ಬಸವನಬಾಗೇಬಾಡಿ ಪೊಲೀಸರು ಪರಿಶೀಲನೆ ನಡೆಸಿದ್ದಾರೆ.

## ದೆಹಲಿ ಸಿಎಂ ಕೇಜ್ರಿವಾಲ್ ಬಂಧನ ಪ್ರಶ್ನಿಸಿ ಅರ್ಜಿ: ತೀಪು ಕಾಯ್ದಿರಿಸಿದ ದೆಹಲಿ ಹೈಕೋರ್ಟ್



ನವದೆಹಲಿ: ರದ್ದಾಗಿರುವ ದೆಹಲಿ ಅಬಕಾರಿ ನೀತಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ(ಇಡಿ) ತಮ್ಮನ್ನು ಬಂಧಿಸಿದ ಕ್ರಮ ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ, ಬುಧವಾರ ತೀಪು ಕಾಯ್ದಿರಿಸಿದೆ.

ಆಮ್ ಆದ್ಮಿ ಪಕ್ಷದ(ಎಎಪಿ) ರಾಷ್ಟ್ರೀಯ ಸಂಚಾಲಕ ಕೇಜ್ರಿವಾಲ್ ಅವರು ತಮ್ಮ ಬಂಧನ ಮತ್ತು ಇಡಿ ಕಸ್ಟಡಿಯನ್ನು ಪ್ರಶ್ನಿಸಿ ದೆಹಲಿ ಹೈಕೋರ್ಟ್ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ಆದೇಶ ಕಾಯ್ದಿರಿಸಿದೆ.

ಅರವಿಂದ್ ಕೇಜ್ರಿವಾಲ್ ಅವರನ್ನು ಕಳೆದ ಸೋಮವಾರ ದೆಹಲಿಯ ರೋಸ್ ಅವೆನ್ಯೂ ಕೋರ್ಟ್ 15 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿಯನ್ನು "ಕಿಂಗ್‌ಪಿನ್" ಎಂದು ಇಡಿ ಆರೋಪಿಸಿದ್ದು, ಎಎಪಿ ನಾಯಕ "ತಪ್ಪಿಸಿಕೊಳ್ಳುವ ಉತ್ತರ" ನೀಡಿದ್ದಾರೆ ಮತ್ತು ತನಿಖೆಗೆ ಸಂಬಂಧಿಸಿದ ಮಾಹಿತಿಯನ್ನು ಮರೆಮಾಚುತ್ತಿದ್ದಾರೆ ಎಂದು ನ್ಯಾಯಾಲಯಕ್ಕೆ ತಿಳಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ಸಂಸ್ಥೆ ಮಾರ್ಚ್ 21 ರಂದು ಕೇಜ್ರಿವಾಲ್ ಅವರನ್ನು ಬಂಧಿಸಿತ್ತು. ಮರುದಿನ, ವಿಶೇಷ ನ್ಯಾಯಾಧೀಶೆ ಕಾವೇರಿ ಬವೇಜಾ ಅವರು ಆರೋಪಿ ದೆಹಲಿ ಸಿಎಂ ಅನ್ನು ಮಾರ್ಚ್ 28 ರವರೆಗೆ ಜಾರಿ ನಿರ್ದೇಶನಾಲಯದ (ಇಡಿ) ಕಸ್ಟಡಿಗೆ ನೀಡಿದ್ದರು. ನಂತರ ಕೇಜ್ರಿವಾಲ್ ಅವರ ಇಡಿ ಕಸ್ಟಡಿ ಅವಧಿಯನ್ನು ಏಪ್ರಿಲ್ 1 ರವರೆಗೆ ನಾಲ್ಕು ದಿನಗಳ ಕಾಲ ವಿಸ್ತರಿಸಿತ್ತು.

## ಅಮಿತ್ ಶಾ, ಮೋದಿ ಯಾರೇ ಬರಲಿ ನಮ್ಮ ರಾಜ್ಯದ ಮತದಾರರ ಮನಸ್ಸು ಗೆಲ್ಲೋಕಾಗಲ್ಲ: ಸಿದ್ದರಾಮಯ್ಯ ಸಿಎಂ ಗುಡುಗು



ಬೆಂಗಳೂರು: ನಮ್ಮ ರಾಜ್ಯಕ್ಕೆ ಅಮಿತ್ ಶಾ, ಜೆ.ಪಿ. ನಡ್ಡಾ, ಪ್ರಧಾನಿ ಮೋದಿಯವರು ಯಾರೇ ಬರಲಿ ಮತದಾರರ ಮನ ಗೆಲ್ಲಲು ಸಾಧ್ಯವಾಗುವುದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಅಮಿತ್ ಶಾ ಉನ್ನತ ಮಟ್ಟದ ಸಮಿತಿಯ ಅಧ್ಯಕ್ಷರು, ಕರ್ನಾಟಕಕ್ಕೆ ಬರ ಪರಿಹಾರ ಹಣ ನೀಡಿದ್ದಾರೆಯೇ? ಅದನ್ನು ಕೊಡದೇ ಇಲ್ಲಿಗೇ ಬಂದು ಮತ ನೀಡಿ ಎಂದು ಕೇಳೋದಕ್ಕೆ ಯಾವ ನೈತಿಕ ಹಕ್ಕಿದೆ? ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿರುವ ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿಯವರು ಬಿಜೆಪಿ ಹೈಕಮಾಂಡ್ ಬಳಿ ಕರ್ನಾಟಕಕ್ಕೆ ಬರ ಪರಿಹಾರ ಕೊಡಿ ಎಂದು ಕೇಳಬೇಕಲ್ಲವೇ, ಮೇಕೆದಾಟುಗೆ ಅನುಮತಿ ಕೊಟ್ಟಿದ್ದಾರೆಯೇ, ಮಹದಾಯಿಗೆ ಪರಿಸರ ಇಲಾಖೆಯಿಂದ ಅನುಮತಿ ನೀಡಿದ್ದಾರೆಯೇ, ಭದ್ರಾ ಮೇಲ್ದಂಡೆ ಯೋಜನೆಗೆ ಹಣ ಬಿಡುಗಡೆ ಮಾಡಿದ್ದಾರೆಯೇ 15ನೇ ಹಣಕಾಸು ಆಯೋಗ ಶಿಫಾರಸು ಮಾಡಿರುವ ಪರಿಹಾರ ಕೊಟ್ಟಿದ್ದಾರೆಯೇ ಎಂದು ಸರಣಿ ಪ್ರಶ್ನೆಗಳನ್ನು ಸಿಎಂ ಕೇಳಿದರು.

## ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲ್ಲ, ಬಿಜೆಪಿಗೆ ಸೇರ್ಪಡೆಯಾಗುತ್ತೇನೆ: ಸುಮಲತಾ ಅಂಬರೀಶ್



ಮಂಡ್ಯ: ನಾನು ಈ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುತ್ತಿಲ್ಲ. ಮತ್ತು ನಾನು ಬಿಜೆಪಿಗೆ ಸೇರ್ಪಡೆಯಾಗುತ್ತೇನೆ ಎಂದು ಸಂಸದೆ ಸುಮಲತಾ ಅಂಬರೀಶ್ ಹೇಳಿದರು.

ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಮಂಡ್ಯ ಕ್ಷೇತ್ರದ ಬಿಜೆಪಿ ಟಿಕೆಟ್ ತನಗೆ ಸಿಗುತ್ತದೆ ಎಂದು ಹಾಲಿ ಸಂಸದೆ ಸುಮಲತಾ ಅಂಬರೀಶ್ ನಿರೀಕ್ಷೆಯಲ್ಲಿದ್ದರು. ಆದರೆ ಕೊನೆ ಹಂತದಲ್ಲಿ ಸುಮಲತಾ ಅಂಬರೀಶ್ ಅವರಿಗೆ ಟಿಕೆಟ್ ತಪ್ಪಿದೆ. ಹೀಗಾಗಿ ಸುಮಲತಾ ಅಂಬರೀಶ್ ಅವರ ಮುಂದಿನ ನಡೆ ಏನು ಎಂಬುವುದು ಯಕ್ಷ ಪ್ರಶ್ನೆಯಾಗಿತ್ತು. ಈ ಪ್ರಶ್ನೆಗೆ ಮಂಡ್ಯದಲ್ಲಿ ಕಾರ್ಯಕರ್ತರ ಸಭೆ ನಡೆಸಿ ಮಾತನಾಡಿದ ಅವರು, ನಾನು ಕಾಂಗ್ರೆಸ್ ಪಕ್ಷಕ್ಕೆ ಹೋಗುವುದಿಲ್ಲ. ನೀವು ಬೇರೆ ಯಾವುದೆ ನಿರ್ಧಾರ ತೆಗೆದುಕೊಳ್ಳಬೇಡಿ ಅಂತ ಸ್ವತಃ ಪ್ರಧಾನಿ ಮೋದಿಯವರು ನನಗೆ ಹೇಳಿದ್ದಾರೆ ಎಂದು ತಿಳಿಸಿದರು.

ನಾನು ಆಕಸ್ಮಿಕವಾಗಿ ರಾಜಕೀಯ ಪ್ರವೇಶ ಮಾಡಿದೆ. ಐದು ವರ್ಷಗಳ ಹಿಂದೆ ನನಗೆ ಐತಿಹಾಸಿಕ ಗೆಲುವು ನೀಡಿದ್ದಿರಿ. ನನಗೆ ಐತಿಹಾಸಿಕ ಗೆಲುವು ಕೊಡುಗೆಯಾಗಿ ಕೊಟ್ಟಿದ್ದೀರಿ. ಐದು ವರ್ಷಗಳಲ್ಲಿ ನನ್ನ ಜೊತೆಗಿದ್ದ ಎಲ್ಲರಿಗೂ ವಂದನೆಗಳು. ಜನಸಾಮಾನ್ಯರ ಸಮಸ್ಯೆಗಳ ಪರ ನಾನು ನಿಂತಿದ್ದೇನೆ. ಜಿಲ್ಲೆ ಅಭಿವೃದ್ಧಿ ಮಾಡುವುದಷ್ಟೇ ನನ್ನ ಮನಸ್ಸಿನಲ್ಲಿದ್ದಿದ್ದು. ಕೆಆರ್‌ಎಸ್ ಡ್ಯಾಂ ಸಂರಕ್ಷಣೆ, ಅಕ್ರಮ ಗಣಿಗಾರಿಕೆ ವಿರುದ್ಧ ಯುದ್ಧವನ್ನೇ ಮಾಡಿದ್ದೇನೆ. ಮೈಷುಗರ್ ಕಾರ್ಖಾನೆಗಾಗಿ ಎರಡು ವರ್ಷ ಹೋರಾಡಿದ್ದೇನೆ ಎಂದು ತಿಳಿಸಿದರು.

2019ರಲ್ಲಿ ಅದೊಂದು ಬೇರೆ ತರಹದ ಸವಾಲಾಗಿತ್ತು. ಈಗ ಬದಲಾದ ಪರಿಸ್ಥಿತಿಯಲ್ಲಿ ಮತ್ತೊಂದು ಸವಾಲು ಎದುರಿಸುತ್ತಿದ್ದೇನೆ. ಕೊನೆಗಳಿಗೆವರೆಗೂ ಬಿಜೆಪಿ ಟಿಕೆಟ್ ಉಳಿಸಿಕೊಳ್ಳಲು ಹೋರಾಟ ಮಾಡಿದೆ. ಬೆಂಗಳೂರು ಉತ್ತರ, ಮೈಸೂರು, ಚಿಕ್ಕಬಳ್ಳಾಪುರ ನಿಂತುಕೊಳ್ಳೊಲು ಹೇಳಿದರು. ನನಗೆ ಬೇರೆ ಬೇರೆ ಕ್ಷೇತ್ರದ ಆಫರ್ ನೀಡಿದರು. ನಾನು ಮಂಡ್ಯ ಬಿಟ್ಟು ಎಲ್ಲೂ ಹೋಗುವುದಿಲ್ಲ. ಗೆದ್ದರು, ಸೋತರು ಮಂಡ್ಯ ಬಿಟ್ಟು ಎಲ್ಲೂ ಹೋಗಲ್ಲ ಎಂದರು.

ಸುಮಲತಾ ಅವಶ್ಯಕತೆ ನಮಗೆ ಬೇಕಿಲ್ಲ ಅಂತ ಕಾಂಗ್ರೆಸ್ನ ಪ್ರಮುಖ ನಾಯಕರು ಹೇಳಿದರು. ನನಗೆ ಗೌರವ ಇಲ್ಲದ ಕಡೆ ಹೋಗಿ ಎಂದು ಒತ್ತಾಯಿಸಬೇಡಿ. ನಾನು ಕಾಂಗ್ರೆಸ್ಗೆ ಹೋಗಲ್ಲ. ಕಾಂಗ್ರೆಸ್ನವರು ಬೇಡ ಎಂದಿದ್ದಾರೆ, ನಾನು ಹೋಗಲ್ಲ. ಕೇಂದ್ರ ಸರ್ಕಾರ ನಾಲ್ಕು ಸಾವಿರ ಕೋಟಿ ಅನುದಾನ ನೀಡಿದೆ. ಪ್ರತಿ ವಿಷಯದಲ್ಲೂ ನನ್ನನ್ನು ವಿಶ್ವಾಸಕ್ಕೆ ಪಡೆಯುತ್ತಿದ್ದರು. ಯಾವುದೇ ನಿರ್ಧಾರ ತೆಗೆದುಕೊಳ್ಳಬೇಡಿ ಎಂದು ಪ್ರಧಾನಿ ನರೇಂದ್ರ ಮೋದಿಯವರು ಹೇಳಿದರು ಎಂದು ತಿಳಿಸಿದ್ದಾರೆ.

ಸಂಸದೆ ಸ್ಥಾನ ಶಾಶ್ವತವಲ್ಲ. ಮತ್ತೊಬ್ಬರು ಸಂಸದರಾಗಿ ಬರುತ್ತಾರೆ. ಆದರೆ ನಾನು ಮಂಡ್ಯದ ಸೊಸೆಯಾಗಿ ಕೊನೆಯವರೆಗೂ ಉಳಿಯುತ್ತೇನೆ. ಬದಲಾದ ಪರಿಸ್ಥಿತಿ, ಸನ್ನಿವೇಶವನ್ನು ನಾವು ಅರ್ಥ ಮಾಡಿಕೊಳ್ಳಬೇಕು. ಹಠ ಸಾಧನೆ ಮಾಡುವ ಉದ್ದೇಶ ಇದ್ದರೇ ಪಕ್ಷೇತರ ಸ್ಪರ್ಧೆ ಮಾಡಬಹುದು. ಅದರಿಂದ ಯಾರಿಗೆ ಲಾಭ? ನನ್ನ ಸ್ವಾರ್ಥ ಏನು ಇಲ್ಲ, ಲಾಭಕ್ಕಾಗಿ ಯೋಚಿಸಿದರೇ ಬೇರೆ ಕ್ಷೇತ್ರ ಆಯ್ಕೆ ಮಾಡಬಹುದಿತ್ತು.

ಬಂದ ಅವಕಾಶಗಳನ್ನು ಮಂಡ್ಯಕ್ಕಾಗಿ ಬಿಟ್ಟಿದ್ದೇನೆ. ರಾಜಕೀಯ ಮಾಡಿದರೇ ಮಂಡ್ಯದಲ್ಲಿ ಮಾತ್ರ ಅಂತ ನಿರ್ಧಾರ ಮಾಡಿದ್ದೇನೆ. ಅಸಂಖ್ಯಾತ ಅಂಬರೀಶ್ ಅಭಿಮಾನಿಗಳನ್ನ ಬಿಟ್ಟು ಹೋದರೆ ಮಂಡ್ಯ ಸೊಸೆ ಅನಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದರು.

## ಹಿರಿಯ ಪತ್ರಕರ್ತ ಎಂ.ಕೆ. ಭಾಸ್ಕರ್ ರಾವ್ ನಿಧನ; ಮುಖ್ಯಮಂತ್ರಿ ಕಂಬನಿ



ಬೆಂಗಳೂರು: ಹಿರಿಯ ಪತ್ರಕರ್ತ ಎಂ.ಕೆ.ಭಾಸ್ಕರರಾವ್ ಅವರು ಬೆಂಗಳೂರಿನಲ್ಲಿ ಬುಧವಾರ ನಿಧನರಾಗಿದ್ದಾರೆ. ಅವರಿಗೆ 75 ವರ್ಷ ವಯಸ್ಸಾಗಿತ್ತು. ಎರಡು ವರ್ಷದಿಂದ ಕ್ಯಾನ್ಸರ್ ನಿಂದ ಬಳಲುತ್ತಿದ್ದ ಅವರು ಅನಾರೋಗ್ಯಕ್ಕೆ ಒಳಗಾಗಿದ್ದರು.

ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಚಿಕಿತ್ಸೆ ಫಲಕಾರಿಯಾಗದೇ ಇಂದು ಬೆಳಗ್ಗೆ ಕೊನೆಯುಸಿರೆಳೆದರು ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ. ಮೃತರಿಗೆ ಪತ್ನಿ ಜಯಾ, ಪುತ್ರ ಅಭಿಜಿತ್ ಇದ್ದಾರೆ. ಬೆಂಗಳೂರಿನ ಬನ್ನೇರಘಟ್ಟ ರಸ್ತೆಯಲ್ಲಿರುವ ಸೌತ್ ಸಿಟಿ ಅಪಾರ್ಟ್ ಮೆಂಟ್ ಗೆ ಪಾರ್ಥಿವ ಶರೀರವನ್ನು ತರಲಾಗಿದ್ದು, ಅಲ್ಲಿಯೇ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ.

ಮೂಲತಃ ಶಿರಸಿ ತಾಲ್ಲೂಕಿನವರಾದ ಎಂ.ಕೆ.ಭಾಸ್ಕರರಾವ್ ಅವರು ಬೆಳೆದಿದ್ದು ಶಿವಮೊಗ್ಗ ಜಿಲ್ಲೆಯ ಸಾಗರದಲ್ಲಿ. ಅಲ್ಲಿಯೇ ಶಿಕ್ಷಣ ಮುಗಿಸಿ ನಂತರ ಪತ್ರಿಕೋದ್ಯಮ ಸೇರಿದವರು. ಪ್ರಜಾವಾಣಿ ಪತ್ರಿಕೆಯಲ್ಲಿಯೇ ಮೂರು ದಶಕಕ್ಕೂ ಅಧಿಕ ಕಾಲ ಕೆಲಸ ಮಾಡಿದ್ದರು. ಸಮಾಜಮುಖಿ ಪತ್ರಕರ್ತರಾಗಿದ್ದ ಭಾಸ್ಕರರಾವ್ ತಮ್ಮ ಹರಿತ ಬರವಣಿಗೆ ಮಾತ್ರವಲ್ಲದೇ ಮಾತಿನಿಂದಲೂ ಗುರುತಿಸಿಕೊಂಡಿದ್ದರು. ಚುನಾವಣೆ ವೇಳೆ ಹಲವಾರು ಚಾನೆಲ್‌ಗಳಲ್ಲಿ ವಿಶ್ಲೇಷಣೆ ಮಾಡುತಿದ್ದರು. ಪ್ರಚಲಿತ ವಿದ್ಯಾಮಾನಗಳ ಕುರಿತು ನಿಖರವಾಗಿ ಮಾತನಾಡುವ ಜ್ಞಾನ ಅವರಲ್ಲಿತ್ತು.

**ಮುಖ್ಯಮಂತ್ರಿ ಕಂಬನಿ:** ಹಿರಿಯ ಪತ್ರಕರ್ತರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಂಬನಿ ಮಿಡಿದಿದ್ದಾರೆ.

## ಬಿಜೆಪಿ ನಾಯಕರಿಗೆ ಸೆಡ್ಡು ಹೊಡೆದ ಈಶ್ವರಪ್ಪ




ಶಿವಮೊಗ್ಗ: ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಶಿವಮೊಗ್ಗ ಲೋಕಸಭಾ ಕ್ಷೇತ್ರ ಹೈವೋಲ್ಟೇಜ್ ಕ್ಷೇತ್ರವಾಗಿದೆ. ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬಿ.ವೈ ರಾಘವೇಂದ್ರ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜ್‌ಕುಮಾರ್ ಜಿದ್ದಾಜಿದ್ದಿಯ ನಡುವೆ ಬಿಜೆಪಿ ಬಂಡಾಯ ಅಭ್ಯರ್ಥಿ ಕೆ.ಎಸ್ ಈಶ್ವರಪ್ಪ ಕೂಡ ಅಬ್ಬರ ಪ್ರಚಾರ ಆರಂಭಿಸಿದ್ದಾರೆ.

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರ ವಿರೋಧದ ಮಧ್ಯೆಯೂ ಈಶ್ವರಪ್ಪ ಶಿವಮೊಗ್ಗದಲ್ಲಿ ಪ್ರಚಾರ ಆರಂಭಿಸಿದ್ದಾರೆ. ಪುರಲೆಗಣಪತಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸು ಮೂಲಕ ಪ್ರಚಾರ ಆರಂಭಿಸಿದ್ದ ಕೆ.ಎಸ್ ಈಶ್ವರಪ್ಪ ಇಂದು ಕೂಡ ಬೆಳ್ಳಂಬೆಳಗ್ಗೆಯಿಂದಲೇ ಕ್ಷೇತ್ರದಲ್ಲಿ ಪ್ರಚಾರ ನಡೆಸಿದ್ದಾರೆ.

ಶಿವಮೊಗ್ಗದಲ್ಲಿ ಬೆಳ್ಳಂಬೆಳಗ್ಗೆ ಪ್ರಚಾರಕ್ಕೆ ಇಳಿದ ಕೆ.ಎಸ್. ಈಶ್ವರಪ್ಪ ನಗರ ಹೊರವಲಯದ ತ್ಯಾವರೆ ಚಟ್ನಹಳ್ಳಿ ಗ್ರಾಮದಲ್ಲಿ ಪ್ರಚಾರ ನಡೆಸಿದ್ದಾರೆ. ತಾನು ಈ ಬಾರಿ ಚುನಾವಣೆಗೆ ನಿಲ್ಲುವುದಾಗಿ, ತನಗೆ ಮತನೀಡಿ ಎಂದು ಮತದಾರರಲ್ಲಿ ಮನವಿ ಮಾಡುತ್ತಿದ್ದಾರೆ. ಪುತ್ರ ಕಾಂತೇಶ್ ಕೂಡ ಪ್ರಚಾರದಲ್ಲಿ ತಂದೆಗೆ ಸಾಥ್ ನೀಡಿದ್ದಾರೆ. ಬಂಡಾಯ ಸ್ಪರ್ಧೆ ಘೋಷಣೆ ಮಾಡಿದ ಕ್ಷಣದಿಂದಲೂ ಕೆ.ಎಸ್ ಈಶ್ವರಪ್ಪ ಕ್ಷೇತ್ರದಲ್ಲಿ ಪ್ರಚಾರ ನಡೆಸುತ್ತುದ್ದು, ಪಕ್ಷದ ವಿರುದ್ಧ ತೀವ್ರ ಅಸಮಾಧಾನಗೊಂಡಿರುವ ಈಶ್ವರಪ್ಪ ಮನವೊಲಿಸಲು ರಾಷ್ಟ್ರೀಯ ನಾಯಕರು ಕೂಡ ಕಸರತ್ತು ನಡೆಸುತ್ತಿದ್ದಾರೆ. ಹೀಗಾಗಿ ಬಿಜೆಪಿ ಹೈಕಮಾಂಡ್ ಕೆ.ಎಸ್ ಈಶ್ವರಪ್ಪಗೆ ಬುಲಾವ್ ನೀಡಿದ್ದು, ಇಂದು ಸಂಜೆ ಅವರ ದೆಹಲಿಗೆ ತೆರಳಲಿದ್ದಾರೆ.

ಧಾರ್ಮಿಕ ಕೇಂದ್ರದಲ್ಲಿ ಚುನಾವಣಾ ಪ್ರಚಾರ ಆರೋಪ ಹಿನ್ನೆಲೆ ಬಿಜೆಪಿ ಬಂಡಾಯ ನಾಯಕ ಕೆ.ಎಸ್ ಈಶ್ವರಪ್ಪ ವಿರುದ್ಧ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣ ದಾಖಲಿಸಲಾಗಿದೆ. ಶಿವಮೊಗ್ಗದ ಗೋಪಾಳದ ರಂಗನಾಥಸ್ವಾಮಿ ದೇವಾಲಯಕ್ಕೆ ತೆರಳಿದ್ದ ಈಶ್ವರಪ್ಪ ಈ ವೇಳೆ ಮತಪ್ರಚಾರ ಮಾಡಿದ್ದಾರೆ. ಧಾರ್ಮಿಕ ಕೇಂದ್ರದಲ್ಲಿ ಪ್ರಚಾರ ಮಾಡಿದ್ದಾರೆ ಎಂದು ಆರೋಪಿಸಿ ಚುನಾವಣಾ ಅಧಿಕಾರಿಗಳಿಂದ ತುಂಗಾನಗರ ಠಾಣೆಗೆ ದೂರು ಸಲ್ಲಿಸಿದ್ದಾರೆ.

# ಕೊಟ್ಟ ಮಾತನ್ನು ತಪ್ಪಿಸೋಲ್ಲ, ನಾವೂ ಅಷ್ಟೆ, ನಮ್ಮ ಪಾರ್ಟಿಯೂ ಇಷ್ಟೆ: ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ : ಜನಪ್ರತಿನಿಧಿಗಳಾದವ–ರಿಗೆ ಪ್ರಾಮಾಣಿಕತೆ ಮುಖ್ಯ. ಸಂದರ್ಭಕ್ಕೆ ತಕ್ಕಂತೆ ಮಾತು ಬದಲಾಯಿಸುವವರನ್ನು ಜನರು ನಂಬುವುದಿಲ್ಲ. ನಾವಾಗಲಿ, ನಮ್ಮ ಪಾರ್ಟಿಯಾಗಲಿ ಜನರಿಗೆ ಕೊಟ್ಟ ಮಾತನ್ನು ಎಂದೂ ಹಿಂತೆಗೆಯುವುದಿಲ್ಲ. ಹಾಗಾಗಿಯೇ ಗಳಿಸಿಕೊಂಡಿರುವ ಜನರ ವಿಶ್ವಾಸವನ್ನು ಉಳಿಸಿಕೊಳ್ಳಲು ಸಾಧ್ಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಬೆಳಗಾವಿ ತಾಲೂಕಿನ ಕುದ್ರೆಮನಿ, ಕಲ್ಲೇಹೊಳ ಮೊದಲಾದ ಗ್ರಾಮಗಳಲ್ಲಿ ಲೋಕಸಭೆಯ ಚುನಾವಣಾ ಪ್ರಚಾರಾರ್ಥ–ರ್ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಬುಧವಾರ ಪ್ರಚಾರ ಕೈಗೊಂಡು ಅವರು ಮಾತನಾಡಿದರು. ನಾನು ಕಳೆದಬಾರಿ ಶಾಸಕಿಯಾಗುವ ಮುನ್ನ ನೀಡಿದ್ದ ಎಲ್ಲ ಭರವಸೆಗಳನ್ನು ಪ್ರಾಮಾಣಿಕವಾಗಿ ಈಡೇರಿಸಿದ್ದರಿಂದ ಜನರು ಮೊದಲಬಾರಿಗಿಂತ ಹೆಚ್ಚಿನ ಮತ ನೀಡಿ ಆಯ್ಕೆ ಮಾಡಿದರು. ನನ್ನನ್ನು ಮನೆ ಮಗಳು ಎಂದು ಪ್ರೀತಿಸಿದರು. ಇಡೀ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಜನರು ನಮ್ಮನ್ನು ತಮ್ಮದೇ ಕುಟುಂಬದ ಸದಸ್ಯರಂತೆ ಕಾಣುತ್ತಿದ್ದಾರೆ. ಇಂತಹ ಅವಿನಾಭಾವ ಸಂಬಂಧ ಬೇರೆ ಬಹುತೇಕ ಜನಪ್ರತಿನಿಧಿಗಳು ಮತ್ತು ಜನರ ಮಧ್ಯೆ ಕಾಣಲು ಸಾಧ್ಯವಿಲ್ಲ ಎಂದು ಹೆಬ್ಬಾಳಕರ್ ಹೇಳಿದರು.

ನಾನು ಕೆಲಸದ ನಿಮಿತ್ತ ಬೆಂಗಳೂರಿಗೆ ಮತ್ತು ಉಡುಪಿಗೆ ಹೋದಾಗ ಕೂಡ ನನ್ನ ಸಹೋದರ ಚನ್ನರಾಜ ಹಟ್ಟಿಹೊಳಿ ಮತ್ತು ಮಗ ಮೃಣಾಲ ಹೆಬ್ಬಾಳಕರ್ ಕ್ಷೇತ್ರದ ಜನರ ಯೋಗಕ್ಷೇಮ ನೋಡಿಕೊಳ್ಳುತ್ತಾರೆ. ಕ್ಷೇತ್ರದ ಜನರಿಗೆ ಎಂದಿಗೂ ಅನಾಥಪ್ರಜ್ಞೆ ಕಾಡದಂತೆ ನೋಡಿಕೊಂಡಿದ್ದೇವೆ. ದಿನದ 24 ಗಂಟೆಯೂ ಸೇವೆಗೆ ನಮ್ಮನ್ನು ತೊಡಗಿಸಿಕೊಂಡಿದ್ದೇವೆ. ಕೊರೋನಾ, ಪ್ರವಾಹದಂತಹ ಸಂದರ್ಭದಲ್ಲಿ ನಾವು ಮಾಡಿದ ಕೆಲಸವನ್ನು ಕ್ಷೇತ್ರದ ಜನರು ನೋಡಿದ್ದೀರಿ. ಹಾಗಾಗಿ ಬರುವ ಲೋಕಸಭಾ ಚುನಾವಣೆಯಲ್ಲಿ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡುವ ಮೂಲಕ ನಿಮ್ಮ ಸೇವೆ ಮಾಡುವ ನಮ್ಮ ಕೈಗಳನ್ನು ಇನ್ನಷ್ಟು ಬಲಪಡಿಸಿ ಎಂದು ಅವರು ವಿನಂತಿಸಿದರು.

ಕಾಂಗ್ರೆಸ್ ಪಕ್ಷ ಕೂಡ ಚುನಾವಣೆ ಪೂರ್ವ ನೀಡಿದ್ದ ವಚನದಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾ–ರಿಗೊಳಿಸಿದೆ. ಪ್ರತಿಯೊಂದು ಕುಟುಂಬಕ್ಕೂ ಒಂದಿಲ್ಲೊಂದು ಯೋಜನೆಯ ಲಾಭ ಸಿಗುವಂತೆ ಮಾಡಿದ್ದೇವೆ. ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ಯೋಜನೆ ತಲುಪುವಂತೆ ಮಾಡಿದ್ದೇವೆ. ತನ್ಮೂಲಕ ತಿಂಗಳಿಗೆ 4 –5 ಸಾವಿರ ರೂ. ಉಳಿಸಿಕೊಟ್ಟಿದ್ದೇವೆ. ಲೋಕಸಭಾ ಚುನಾವಣೆ ಹೊತ್ತಿನಲ್ಲಿ ಕೂಡ ಕಾಂಗ್ರೆಸ್ ಇನ್ನಷ್ಟು ಗ್ಯಾರಂಟಿಗಳನ್ನು ಘೋಷಿಸಿದೆ. ಬಡ ಕುಟುಂಬದ ಹೆಣ್ಣುಮಗಳಿಗೆ ಒಂದು ಲಕ್ಷ ರೂ. ನೀಡಿವ ಭರವಸೆ ನೀಡಿದೆ. ಹಾಗಾಗಿ ಹಸ್ತದ ಗುರುತಿಗೆ ಮತ ನೀಡುವ ಮೂಲಕ , ಸ್ವಚ್ಛ, ಪ್ರಾಮಾಣಿಕ ಮತ್ತು ಅಭಿವೃದ್ಧಿಪರ ಆಡಳಿತಕ್ಕೆ ಸಹಕಾರ ನೀಡಿ ಎಂದು ಲಕ್ಷ್ಮೀ ಹೆಬ್ಬಾಳಕರ್ ಕೋರಿದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮಾತನಾಡಿ, ಕಳೆದ 10 ವರ್ಷಗಳಿಂದ ನಾನು ತಾಯಿ ಲಕ್ಷ್ಮೀ ಹೆಬ್ಬಾಳಕರ್ ಅವರ ಜೊತೆಗೆ ನಿಮ್ಮ ಸೇವೆಯಲ್ಲಿ ನನ್ನನ್ನು ತೊಡಗಿಸಿಕೊಂಡಿದ್ದೇನೆ. ನಮ್ಮದು ನಿಸ್ವಾರ್ಥ ಸೇವೆ. ಕೊರೋನಾ ಸಂದರ್ಭದಲ್ಲಿ ನಮ್ಮ ಕುಟುಂಬಕ್ಕೂ ಕೊರೋನಾ ಬಂದರೂ ಜನರ ಸೇವೆಯಲ್ಲಿ ಚ್ಯುತಿ ಬಾರದಂತೆ ಕಾರ್ಯನಿರ್ವಹಿಸಿದ್ದೇವೆ.

ಔಷಧ, ದಿನಸಿ ಕಿಟ್ ಗಳನ್ನು ತಲುಪಿಸಿದ್ದೇವೆ, ಅಂಬುಲೆನ್ಸ್ ಸೇವೆ ಒದಗಿಸಿದ್ದೇವೆ. ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ವ್ಯವಸ್ಥೆ ಮಾಡಿದ್ದೇವೆ. ಪ್ರವಾಹದ ಸಂದರ್ಭದಲ್ಲಿ ನಿಮ್ಮನ್ನು ರಕ್ಷಿಸುವ ಕೆಲಸ ಮಾಡಿದ್ದೇವೆ. ಹಾಗಾಗಿ ಈ ಚುನಾವಣೆಯಲ್ಲಿ ತಪ್ಪದೇ ನನಗೆ ಮತ ನೀಡುವ ಮೂಲಕ ಆಶಿರ್ವದಿಸಿ ಎಂದು ವಿನಂತಿಸಿದರು.

ಗ್ರಾಮದ ಹಿರಿಯರು, ಯುವರಾಜ ಕದಂ, ಪಕ್ಷದ ಮುಖಂಡರು, ಕಾರ್ಯಕರ್ತರು ಇದ್ದರು.

### ಮಂಗಳಮುಖಿಯರಿಂದ ಮತದಾನ ಜಾಗೃತಿ ಜಾಥಾ

## ಪ್ರತಿಯೊಬ್ಬರು ತಪ್ಪದೇ ಮತ ಚಲಾಯಿಸಬೇಕು: ಜಿಪಂ ಸಿಇಒ ರಾಹುಲ್ ಶಿಂಧೆ ಕರೆ

ಬೆಳಗಾವಿ: ನಗರದಲ್ಲಿ ಬುಧವಾರ (ಏ.3) ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದಲ್ಲಿ ಲಿಂಗತ್ವ ಅಲ್ಪ ಸಂಖ್ಯಾತರು ಹಾಗೂ ಮಾಜಿ ದೇವದಾಸಿಯರಿಂದ ಮತದಾನದ ಕುರಿತು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ನಗರದ ಚನ್ನಮ್ಮ ವೃತ್ತದಲ್ಲಿ ಜಾಗೃತಿ ಜಾಥಾಗೆ ಚಾಲನೆ ನೀಡಿದ ಜಿಪಂ ಸಿಇಒ ರಾಹುಲ್ ಶಿಂಧೆ ಅವರು, ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಲಿಂಗತ್ವ ಅಲ್ಪ ಸಂಖ್ಯಾತರು ಕೂಡಾ ಮತದಾನದಿಂದ ದೂರುಳಿಯದೇ ಮತದಾನದಲ್ಲಿ ಭಾಗಿಯಾಗಬೇಕು.

ಪ್ರಜಾಪ್ರಭುತ್ವ ಹಬ್ಬವಾಗಿ ಚುನಾವಣೆಯಲ್ಲಿ ನಿಮ್ಮ ನಾಯಕನನ್ನು ಆಯ್ಕೆ ಮಾಡಲು ತಪ್ಪದೇ ಮತದಾನ ಮಾಡಬೇಕು.

ನಗರ ಪ್ರದೇಶದಲ್ಲಿ ಕಡಿಮೆ ಮತದಾನ ವಾಗುತ್ತಿದೆ. ಪ್ರಜ್ಞಾವಂತರು ಮತದಾನ ಮಾಡುವ ಮೂಲಕ




ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸಬೇಕು ಎಂದು ತಿಳಿಸಿದರು.

ಜಾಗೃತಿ ಜಾಥಾ: ನಗರದ ಚನ್ನಮ್ಮ ವೃತ್ತದಲ್ಲಿ ಪ್ರಾರಂಭವಾದ ಮತದಾನದ ಜಾಗೃತಿ ಜಾಥಾವೂ ಡಾ.ಬಿ.ಆರ್. ಅಂಬೇಡ್ಕರ್ ಉದ್ಯಾನ ವನದ ರಸ್ತೆಯ ಮೂಲಕ ಕೃಷ್ಣದೇವರಾಯ ವೃತ್ತದಿಂದ ಮಹಾನಗರ ಪಾಲಿಕೆವರೆಗೆ ಜಾಥಾ ನಡೆಯಿತು. ಸುಮಾರು ಮೂನ್ನುರಕ್ಕು ಹೆಚ್ಚು ಜನರಿಂದ ಜಾಥಾ ಉದ್ದಕ್ಕೂ ಮತದಾನದ ಘೋಷಣೆ ಕೂಗುವುದು, ಜಾಗೃತಿ ಫಲಕಗಳ ಮೂಲಕ ಸಾರ್ವಜನಿಕರಲ್ಲಿ ಮತದಾನದ ಅರಿವು ಮೂಡಿಸಿದರು.

ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಡಾ: ಎಮ್ ಕೃಷ್ಣರಾಜು, ಲೆಕ್ಕಾಧಿಕಾರಿ ಗಂಗಾ ಹಿರೆಮಠ, ಮಹಾನಗರ ಪಾಲಿಕೆ ಆಯುಕ್ತರಾದ ಲೋಕೇಶ ಪಿ.ಎನ್. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್. ನಾಗರಾಜ್ ಯುವಸಬಲೀಕರಣ ಮತ್ತು ಕ್ರಿಡಾ ಇಲಾಖೆ ಉಪ ನಿರ್ದೇಶಕರಾದ ಬಿ. ಶ್ರೀನಿವಾಸ, ನಗರ ಸಿ.ಡಿ.ಪಿಓ ರಾಮಮುರ್ತಿ ಕೆ.ವಿ , ಗ್ರಾಮೀಣ ಸಿ.ಡಿ.ಪಿ.ಓ ಸುಮಿತ್ರಾ ಡಿ.ಬಿ, ಮಹಿಳಾ ಅಭಿವೃದ್ಧಿ ನಿಗಮ ನಿರಿಕ್ಷಕಿ ರೂಪಾ ಪವಾರ ಹಾಗೂ ಇತರ ಸಿಬ್ಬಂದಿಗಳು ಉಪಸ್ಥಿತ–ರಿದ್ದರು.

## ನ್ಯಾಯದ ಪರವಿರುವ ಕಾಂಗ್ರೆಸ್ ಬೆಂಬಲಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ



ಬೆಳಗಾವಿ: ನಮ್ಮ ಕಾಂಗ್ರೆಸ್ ಸರ್ಕಾರ ಪ್ರಾರಂಭಿಸಿದ ಗ್ಯಾರಂಟಿ ಯೋಜನೆಗಳು ಜನರಿಗೆ ಅನುಕೂಲ ಮಾಡಿಕೊಡುವುದರ ಜೊತೆಗೆ ಅಭಿವೃದ್ಧಿ ಕಾಮಗಾರಿಗಳಿಗೂ ಒತ್ತು ನೀಡಿದೆ. ಹೀಗಾಗಿ ಸಾಮಾಜಿ–ಕ ನ್ಯಾಯದ ಪರವಿರುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ಮೂಲಕ ಮೇ 07ರಂದು ಕೈ ಚಿಹ್ನೆಗೆ ಮತ ಚಲಾಯಿಸುವ ಮೂಲಕ ನನ್ನನ್ನು ಸಂಸದೆಯಾಗಿ ಆಯ್ಕೆ ಮಾಡಬೇಕು ಎಂದು ಚಿಕ್ಕೋಡಿ ಲೋಕಸಭಾ ಕೈ ಅಭರ್ಥಿ ಪ್ರಿಯಂಕಾ ಜಾರಕಿಹೊಳಿ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭಾ ಚುನಾವಣೆಯ ಪ್ರಯುಕ್ತ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹುದಲಿ ಜಿಲ್ಲಾ ಪಂ ವ್ಯಾಪ್ತಿಯ ರಂಗಧೋಳಿ ಗ್ರಾಮಕ್ಕೆ ಭೇಟಿ ನೀಡಿ ಮತಯಾಚಿಸಿ ನಂತರ ಮಾತನಾಡಿದ ಅವರು, ಬಿಜೆಪಿ ಕೇಂದ್ರ ಹಾಗೂ ರಾಜ್ಯ ನಾಯಕರು ಸುಳ್ಳು ಭರವಸೆಗಳನ್ನು ನೀಡಿ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ.

ವರ್ಷಕ್ಕೆ 2 ಕೋಟಿ ಉದ್ಯೋಗ ನೀಡುತ್ತೇವೆ ಎಂದು ಹೇಳಿ ಇಲ್ಲಿಯ ತನಕ ಒಂದು ಉದ್ಯೋಗವನ್ನು ಸೃಷ್ಟಿಸಿಲ್ಲ. ಆದ್ದರಿಂದ ಬಿಜೆಪಿಯ ಸುಳ್ಳು ಭರವಸೆಗಳಿಗೆ ನಂಬಿ ಮತ ಹಾಕದೆ ನುಡಿದಂತೆ ನಡೆದ ಕಾಂಗ್ರೆಸ್ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಕಾಂಗ್ರೆಸ್ ಗ್ಯಾರಂಟಿ ಪ್ರತಿ ಮನೆಗೆ ತಿಳಿಸಿ: ಕಾಂಗ್ರೆಸ್ ನುಡಿದಂತೆ ನಡೆದಿದೆ, ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ನಂತರ ವಿಧಾನಸಭೆ ಚುನಾವಣೆಗೂ ಮುನ್ನ ಘೋಷಿಸಿದ್ದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಮುಖ್ಯವಾಗಿ ಕಾಂಗ್ರೆಸ್ ಸರ್ಕಾರ ಮಹಿಳೆಯರನ್ನು ಗಮನದಲ್ಲಿಟ್ಟುಕೊಂಡು ಸಾಕಷ್ಟು ಯೋಜನೆಗಳನ್ನು ಜಾ–ರಿಗೆ ತಂದಿದೆ. ಇದನ್ನು ಮನೆಮನೆಗೆ ತಲುಪಿಸುವ ಮೂಲಕ ಲೋಕಸಭೆ ಚುನಾವಣೆಯಲ್ಲಿ ನನ್ನ ಗೆಲುವಿಗೆ ಸಹಕರಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕ ಅರವಿಂದ ಕಾರ್ಚಿ ಸೇ–ರಿದಂತೆ ರಂಗಧೋಳಿ ಗ್ರಾಮದ ಮುಖಂಡರು, ಹಿರಿಯರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಾನವ ಸರಪಳಿ ಹಾಗೂ ಸಹಿ ಸಂಗ್ರಹಣೆ ಕಾರ್ಯಕ್ರಮ




ಧಾರವಾಡ: ಧಾರವಾಡದ ಅಂಜುಮನ್ ಕಾಲೇಜಿನ ಮುಂಭಾಗದ ರಾಣಾ ಪ್ರತಾಪ್ ಸಿಂಗ್ ವೃತದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆ–2024ರ ಪ್ರಯುಕ್ತ ಹುಬ್ಬಳ್ಳಿ–ಧಾರವಾಡ ಪಶ್ಚಿಮ ಮತಕ್ಷೇತ್ರ ವ್ಯಾಪ್ತಿಯಲ್ಲಿನ ಪದವಿ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಧಾರವಾಡ ಜಿಲ್ಲಾ ಮಟ್ಟದ ಮಾನವ ಸರಪಳಿ ಹಾಗೂ ಸಹಿ ಸಂಗ್ರಹಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿಗಳೂ ಆಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಹಾಗೂ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ಈಶ್ವರ ಉಳ್ಳಾಗಡ್ಡಿ ಅವರು ಸಹಿ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡಿದರು.

ಕಲಾಭವನದಿಂದ ಜಾಥಾ ಮುಖಾಂತರ ಜ್ಯುಬ್ಲಿ ಸರ್ಕಲ್ ನಲ್ಲಿ ಮಾನವ ಸರಪಳಿ ಹಾಗೂ ಪ್ರತಿಜ್ಞಾವಿಧಿಯನ್ನು ಭೋದಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಹಾಗೂ ತಾಲೂಕ ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪದವಿ ಶಿಕ್ಷಣ ಇಲಾಖೆಯ ವಿದ್ಯಾರ್ಥಿಗಳು, ಉಪನ್ಯಾಸಕರು ಮತ್ತು ಇ.ಎಲ್.ಸಿ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

**ಉಪನ್ಯಾಸಕರಿಗೆ ಮತದಾನದ ಜಾಗೃತಿ:** ಇಂದು ಪ್ರೀಸಂ ಪದವಿ ಪೂರ್ವ ಕಾಲೇಜಿನಲ್ಲಿ ಲೋಕಸಭಾ ಚುನಾವಣೆ–2024 ರ ಪ್ರಯುಕ್ತ ಹುಬ್ಬಳ್ಳಿ–ಧಾರವಾಡ ಪಶ್ಚಿಮ ಮತಕ್ಷೇತ್ರ ವ್ಯಾಪ್ತಿಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ದ್ವಿತೀಯ ಪಿ.ಯು.ಸಿ ಮೌಲ್ಯಮಾಪನ ಕೇಂದ್ರಕ್ಕೆ ಭೇಟಿ ನೀಡಿ, ವಿವಿಧ ಜಿಲ್ಲೆಗಳಿಂದ ಮೌಲ್ಯಮಾಪಕರಾಗಿ ಬಂದಂತಹ ಉಪನ್ಯಾಸಕ–ರಿಗೆ ಮತದಾನದ ಜಾಗೃತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿಗಳಾದ ಸ್ವರೂಪ ಟಿ.ಕೆ. ಅವರು ಉದ್ಘಾಟಿಸಿದರು.

ಪ್ರತಿಯೊಬ್ಬರಿಗೂ ಮತದಾನದ ಮೌಲ್ಯದ ಬಗ್ಗೆ ಅರಿವು ಮೂಡಿಸಬೇಕಾಗಿದೆ. ಧಾರವಾಡ ಜಿಲ್ಲೆಯಲ್ಲಿ ಮತದಾನ ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ ಕ್ಯಾಂಪಸ್ ರಾಯಭಾರಿಗಳ ಸಹಯೋಗದೊಂದಿಗೆ ಹೆಚ್ಚಿನ ಪ್ರಮಾಣದಲ್ಲಿ ಮತದಾನವಾಗಬೇಕು. ಅಲ್ಲದೇ ಮತದಾನ ಪ್ರಮಾಣವನ್ನು ಕಳೆದ ಬಾರಿಗಿಂತ ಹೆಚ್ಚಾಗಲೇಬೇಕು ಎಂದು ಅವರು ಸೂಚಿಸಿದರು.

ಕೆ.ಎಂ. ಶೇಖ್ ಅವರು ಮತದಾರರ ಪ್ರತಿಜ್ಞಾವಿಧಿಯನ್ನು ಭೋದಿಸಿದರು.

ಕಾರ್ಯಕ್ರಮದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸುರೇಶ, ಪ್ರೀಸಂ ಕಾಲೇಜಿನ ಪ್ರಾಚಾರ್ಯರಾದ ಸಂಜು ಹುಲ್ಲರ, ವಿವಿಧ ಇಲಾಖೆಗಳ ಅಧಿಕಾ–ರಿಗಳು, ಉಪನ್ಯಾಸಕರು, ಕಾಲೇಜಿನ ಸಿಬ್ಬಂದಿ, ವಿದ್ಯಾರ್ಥಿಗಳು ಸೇರಿದಂತೆ ಇತರರು ಹಾಜರಿದ್ದರು.

## ಜಿಲ್ಲಾ ಸ್ವೀಪ್ ಸಮಿತಿ: ಏ.07 ರಂದು ಸೈಕಲ್ ಜಾಥಾ



ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಬಳ್ಳಾರಿ ನಗರದಲ್ಲಿ ಈ ಹಿಂದಿನ ಚುನಾವಣೆಯಲ್ಲಿ ಕಡಿಮೆ ಮತದಾನವಾದ ಮತಗಟ್ಟೆ ಕೇಂದ್ರಗಳ ವ್ಯಾಪ್ತಿಗಳಲ್ಲಿ ಮತದಾನದ ಮಹತ್ವ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ಏ.07 ರಂದು ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸೈಕಲ್ಲೊಂದಿಗೆ ಹಾಜರಾಗಬೇಕು. ಜಿಲ್ಲಾ ಪಂಚಾಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅವರು ತಿಳಿಸಿದ್ದಾರೆ.

# ಜೀತದಾಳಿನಂತೆ ನಿಮ್ಮ ಸೇವೆಗೈಯುವೆ: ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ



ಮುಧೋಳ : ಬಾಗಲಕೋಟ ಲೋಕಸಭಾ ಕ್ಷೇತ್ರದಿಂದ ಈ ಬಾರಿ ಆಯ್ಕೆ ಮಾಡಿ ಕಳುಹಿಸಿ. ನಾನು ಜೀತದಾಳಿನಂತೆ ಕಾರ್ಯ ಮಾಡುವ ಮೂಲಕ ನಿಮ್ಮೆಲ್ಲರ ಸೇವೆ ಮಾಡುವೆ ಎಂದು ಬಾಗಲಕೋಟೆ ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಹೇಳಿದರು.

ಅವರು ಕಾಂಗ್ರೆಸ್ ಪಕ್ಷದ ಗೃಹಕಚೇರಿಯಲ್ಲಿ ಬೂತ್‌ಮಟ್ಟದ ಏಜೆಂಟರ್ ಸಭೆಯಲ್ಲಿ ಮಾತನಾಡಿ, ವೃತ್ತಿಯಲ್ಲಿ ನ್ಯಾಯವಾದಿಯಾಗಿ, ಕಾಂಗ್ರೆಸ್ ಪಕ್ಷದ ಯುವ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಮತ್ತು ವಿಜಯಪುರ ಡಿಸಿಸಿ ಬ್ಯಾಂಕಿನ ನಿರ್ದೇಶಕಳಾಗಿ ಕಾರ್ಯ ನಿರ್ವಹಿಸಿದ್ದು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತಳಾಗಿ ಕಳೆದ ಎಂಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದೇನೆ. ಈ ಬಾರಿ ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ನಿಮ್ಮ ಮನೆಯ ಮಗಳೆಂದು ಹಾಗೂ ನಿಮ್ಮ ಸಹೋದರಿಯಾಗಿ ಹಗಲಿರುಳು ಕಾರ್ಯ ನಿರ್ವಹಿಸುವ ಮೂಲಕ ಪ್ರತಿ ಮತದಾರರ ಮನೆ–ಮನೆಗೆ ತೆರಳಿ ಮತದಾರ–ರಿಗೆ ತಿಳಿ ಹೇಳುವ ಮೂಲಕ ನನ್ನನ್ನು ಪ್ರಚಂಡ ಬಹುಮತದಿಂದ ಆರಿಸಿ ಕೊಡುವ ಜವಾಬ್ದಾರಿ ನಿಮ್ಮೆಲ್ಲರ ಮೇಲಿದೆ. ಅಂತಹ ಬ್ರಿಟಿಷರ ವಿರುದ್ಧವೇ ಹೋರಾಟ ಮಾಡಿ ಸ್ವಾತಂತ್ರ್ಯ ಪಡೆದ ನಮಗೆ ಬಿಜೆಪಿ ವಿರುದ್ಧ ಚುನಾವಣೆಯಲ್ಲಿ ಗೆಲ್ಲುವುದು ಅಸಾಧ್ಯವೇನಲ್ಲ ಎಂದು ಅವರು ಕಾರ್ಯಕರ್ತರನ್ನು ಹುರುದುಂಬಿಸಿದರು.

ಬಾಗಲಕೋಟೆ ಕಾಂಗ್ರೆಸ್ ಯಾವುದೇ ತರಹದ ಅಸಮಧಾನವಿಲ್ಲ. ಎಲ್ಲರೂ ಸೇರಿ ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸುತ್ತೇವೆ. ಕಳೆದ 20 ವರ್ಷಗಳಿಂದ ಬಾಗಲಕೋಟೆ ಲೋಕಸಭಾ ಕ್ಷೇತ್ರದಿಂದ ಆಯ್ಕೆಯಾಗುತ್ತಿರುವ ಸಂಸದರು ಜಿಲ್ಲೆಯ ಅಭಿವೃದ್ಧಿಯ ನಿಟ್ಟಿನಲ್ಲಿ ಯಾವುದೇ ಕಾರ್ಯ ನಿರ್ವಹಿಸಿಲ್ಲ. ನಾನು ಸಂಸದಳಾಗಿ ಆಯ್ಕೆಯಾಗಿ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಕಾರ್ಯ ನಿರ್ವಹಿಸುತ್ತೇನೆ. ಕೈಗಾರಿಕೆಗಳ ಸ್ಥಾಪನೆ ಮಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿ ಯುವಜನತೆಗೆ ಉದ್ಯೋಗ ದೊರಕಿಸಿಕೊಡಲು ಪ್ರಯತ್ನ ಮಾಡುತ್ತೇನೆ. ಯುಕೆಪಿ ಸಂತ್ರಸ್ತರ ಪರವಾಗಿ ಲೋಕಸಭೆಯಲ್ಲಿ ಗಮನ ಸೆಳೆಯುವ ಮೂಲಕ ಅವರ ಕಷ್ಟಕಾರ್ಪಣ್ಯಗಳ ನಿವಾರಣೆಗೆ ಕಂಕಣಬದ್ಧಳಾಗಿರುತ್ತೇನೆ. ರೈತರ ಕುಂದುಕೊರತೆಗಳ ಬಗ್ಗೆ ಸದಾ ಗಮನದಲ್ಲಿಟ್ಟುಕೊಂಡು ಕಾರ್ಯ ಮಾಡುತ್ತೇನೆ ಎಂದು ಅವರು ಭರವಸೆ ನೀಡಿದರು.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕೇಂದ್ರ ಸರ್ಕಾರ ವಿರುದ್ಧ ಟೀಕೆಗಳ ಸುರಿಮಳೆಗಯ್ದ ಅವರು, ದೇಶ ಕಂಡ ಅತ್ಯಂತ ದುರ್ಬಲ ಪ್ರಧಾನಿ ಮೋದಿಯವರಾಗಿದ್ದು, ದೇಶ ಕಾಯುವಲ್ಲಿ ಬಿಜೆಪಿ ವಿಫಲವಾಗಿದೆ, ದೇಶಭಕ್ತರೆಂದು ಹೇಳಿಕೊಳ್ಳಲು ಅವರು ಲಾಯಕ್ಕಿಲ್ಲ, ದೇಶದಲ್ಲಿ ಆತಂಕದ ವಾತಾವರಣವಿದ್ದು, ಅಕ್ಕಪಕ್ಕದ ದೇಶಗಳೊಂದಿಗೆ ಸೌಜನ್ಯವಿಲ್ಲ, ಮೋದಿ, ಮೋದಿ ಎಂದು ಬಡಬಡಿಸುವ ಕೆಲಸ ನಡೆದಿದ್ದು, ಈಗ ಮೋದಿಯವರ ಯಾವುದೇ ಅಲೆಯಿಲ್ಲ. ಮೋದಿಯವರ ಹವಾ ಈಗ ದೇಶದ ಜನತೆಯ ಮುಂದೆ ಹವಾ ಠುಸ್ಸಾಗಿದೆ. ದೇಶ ಕಂಡ ಅತ್ಯಂತ ದುರ್ಬಲ ಪ್ರಧಾನಿ ಮೋದಿಯವರಾಗಿದ್ದಾರೆ. ಕೇವಲ ಭಾವನಾತ್ಮಕವಾಗಿ ಜನರ ಭಾವನೆಗಳ ಮೂಲಕ ಅವರು ಆಡಳಿತಕ್ಕೆ ಬಂದಿದ್ದು, ದೇಶಾದ್ಯಾಂತ ಬೆಲೆಯೇರಿಕೆಯಾಗುವಂತೆ ಮಾಡಿ ಜನಸಾಮಾನ್ಯರ ಬದುಕನ್ನು ಸಂಕಷ್ಟಕ್ಕೆ ದೂಡಿದ್ದಾರೆ. ಪುಲ್ವಾಮಾ ದಾಳಿಯಲ್ಲಿ ಬಾಂಬ್ ಹಾಕಿ ನಮ್ಮ ದೇಶದ ಸೈನಿಕರನ್ನು ಬಲಿ ಪಡೆದವರಾರು ಎಂಬುದು ಇದುವರೆಗೆ ತನಿಖೆಯಾಗಿಲ್ಲ. ಚೀನಾ ದೇಶ ಮತ್ತೆ ನಮ್ಮ ದೇಶದ ಗಡಿಯನ್ನು ಅತಿ–ಕ್ರಮಿಸಿಕೊಂಡಿದೆಯೆಂದು ತಿಳಿದು ಬಂದಿದ್ದು, ಅದನ್ನು ದೇಶದ ಜನತೆಯ ಮುಂದೆ ಮುಚ್ಚಿಡಲಾಗಿದೆ. ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಉಳಿವಿಗಾಗಿ ಕಾರ್ಯ ನಿರ್ವಹಿಸುವ ನಾಲ್ಕನೇ ಅಂಗವಾದ ಪತ್ರಿಕಾರಂಗವನ್ನು ಗಣನೆಗೆ ತೆಗೆದುಕೊಳ್ಳದೇ ಸರ್ವಾಧಿಕಾರಿ ಆಡಳಿತ ನಡೆಸುತ್ತಿದ್ದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವಂತಹ ಕಾರ್ಯ ನಡೆಸಲಾಗುತ್ತಿದೆ. ಜನರ ಸಮಸ್ಯೆ, ಬೇಕುಬೇಡಿಕೆಗಳ ಬಗ್ಗೆ ಮಾಧ್ಯಮದವರು ಕೇಳುವ ಪ್ರಶ್ನೆಗಳಿಗೆ ಉತ್ತರಿಸದ ಅವರು, ಕಳೆದ ಹತ್ತು ವರ್ಷಗಳಲ್ಲಿ ಒಮ್ಮೆಯೂ ಪತ್ರಿಕಾಗೋಷ್ಠಿ ನಡೆಸಿಲ್ಲ. ಮಾಧ್ಯಮದವರನ್ನು ಹದ್ದುಬಸ್ತಿನಲ್ಲಿಟ್ಟುಕೊಂಡು ಅವರು ದೇಶಭಾರ ಮಾಡಿದ್ದಾರೆ. ನ್ಯಾಯಾಂಗ ಕ್ಷೇತ್ರದಲ್ಲಿ ಹಸ್ತಕ್ಷೇಪ ಮಾಡುವ ಮೂಲಕ ವಿಶ್ವದಲ್ಲಿ ದೇಶದ ಮಾನ ಹರಾಜಾಕಿದಂತಾಗಿದೆ. ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಉಳಿವಿಗಾಗಿ ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿದ್ದು ಕಾಂಗ್ರೆಸ್ ಪಕ್ಷ. ಕಾಂಗ್ರೆಸ್ ಪಕ್ಷ ತ್ಯಾಗಿಗಳ ಪಕ್ಷವಾಗಿದ್ದು ನಮ್ಮ ದೇಶದ ಶಾಂತಿ, ಐಕ್ಯತೆಯ ಸಲುವಾಗಿ ದಿ.ಇಂದಿರಾಗಾಂಧಿ ಹಾಗೂ ದಿ.ರಾಜೀವಗಾಂಧಿಯವರು ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಧರೆಪ್ಪ ಸಾಂಗ್ಲೀಕರ, ಅಶೋಕ ಕಿವಡಿ, ನಗರ ಘಟಕದ ಅಧ್ಯಕ್ಷ ರಾಘು ಮೋಕಾಶಿ, ರಾಜ್ಯ ಯುವ ಘಟಕದ ಪ್ರಕಾ ವಿನಯ ತಿಮ್ಮಾಪೂರ, ಶಿಶಿರ ಮಲಘಾಣ, ಪ್ರಮುಖರಾದ ದಾನೇಶ ತಡಸಲೂರ, ಬಸವಂತ ಕಾಟೆ, ಶೋಭಾ ಮ್ಯಾಗೇರಿ, ಮುದಕಣ್ಣ ಅಂಬಿಗೇರ, ಸದುಗೌಡ ಪಾಟೀಲ, ನಗರಸಭೆ ಸದಸ್ಯರು, ಗ್ರಾಮ ಪಂದಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸಂಸ್ಥಾನ ಲಾಂಛನ: ಪ್ರಮಾದ ಸರಿಪಡಿಸಲು ಆಗ್ರಹ



ಚನ್ನಮ್ಮನ ಕಿತ್ತೂರು: 'ಕಿತ್ತೂರು ಸಂಸ್ಥಾನ ಲಾಂಛನದ ಚಿತ್ರ ಬಿಡಿಸುವಲ್ಲಿ ಆಗಿರುವ ಪ್ರಮಾದ ಸರಿಪಡಿಸಬೇಕು. ಹೀಗೆ ತಪ್ಪುಗಳು ಆಗದಂತೆ ನೋಡಿಕೊಳ್ಳಬೇಕು' ಎಂದು ರಾಜಗುರು ಸಂಸ್ಥಾನ ಕಲ್ಮಠದ ಪೀಠಾಧಿಪತಿ ಮಡಿವಾಳ ರಾಜಯೋಗೀಂದ್ರ ಸ್ವಾಮೀಜಿ ಹಾಗೂ ಗ್ರಾಮಸ್ಥ ಉಮೇಶ ತೋಟದ ಅವರು, ಅಧಿಕಾರಿಗಳು ಮತ್ತು ಗುತ್ತಿಗೆದಾರರನ್ನು ಆಗ್ರಹಿಸಿದ್ದಾರೆ.

'ರಾಷ್ಟ್ರೀಯ ಹೆದ್ದಾರಿ ಬದಿಗೆ ಚನ್ನಮ್ಮನ ವರ್ತುಲದ ಬಳಿ ಇರುವ ಮಹಾದ್ವಾರದ ಮಧ್ಯದ ಫಿಲ್ಲರ್ ಮತ್ತು ಗಡಾದ ಮರಡಿಗೆ ತೆರಳುವ ರಸ್ತೆಯ ಮುಖ್ಯದ್ವಾರದ ಗೇಟಿನ ಮೇಲೆ ರಚಿಸಲಾಗಿರುವ ಕಿತ್ತೂರು ಸಂಸ್ಥಾನದ ಲಾಂಛನದಲ್ಲಿ ಪ್ರಮಾದವಾಗಿದೆ' ಎಂದು ಉಮೇಶ ತೋಟದ ಗಮನ ಸೆಳೆದಿದ್ದಾರೆ.

'ಸಂಸ್ಥಾನದ ರಾಷ್ಟ್ರಧ್ವಜದ ಲಾಂಛನದಲ್ಲಿ ಮಧ್ಯೆ ನಂದಿ ಮೂರ್ತಿ, ಮೇಲೆ ಅರ್ಧಾಕೃತಿ ಚಂದ್ರ, ಪೂರ್ಣ ಸೂರ್ಯ ಚಿಹ್ನೆ, ಕೆಳಗೆ ಖಡ್ಗ ಮತ್ತು ಎದುರಿಗೆ ಶಿವಲಿಂಗ ಮೂರ್ತಿ ಇರಬೇಕು. ಇದೇ ಸಂಸ್ಥಾನದ ಲಾಂಛನ ಎಂದು ಈಗಾಗಲೇ ಗುರುತಿಸಲಾಗಿದೆ' ಎಂದು ಅವರು ಹೇಳಿದರು.

'ಅರಮನೆಗೆ ಸದಾ ಮಾರ್ಗದರ್ಶನ ನೀಡುತ್ತಿದ್ದ ಗುರುಮನೆ ಆಗಿರುವ ಚೌಕೀಮಠದ ಗೋಡೆ ಮೇಲೆ ಶತಮಾನಗಳ ಹಿಂದೆಯೇ ಈ ಲಾಂಛನ ಇರುವುದನ್ನು ಗಮನಿಸಬಹುದು. ಕಿತ್ತೂರು ಸಂಸ್ಥಾನದ ಬಗ್ಗೆ ಸಂಶೋಧನೆ ಕೈಗೊಂಡಿರುವ ಅನೇಕ ಸಂಶೋಧಕರು ಕಿತ್ತೂರು ಸಂಸ್ಥಾನದ ರಾಷ್ಟ್ರಧ್ವಜದಲ್ಲಿ ಇದೇ ಲಾಂಛನ ಇದೆ ಎಂಬುದನ್ನು ಖಚಿತ ಪಡಿಸಿದ್ದಾರೆ. ಹೀಗಾಗಿ ಎಲ್ಲೆ ಲಾಂಛನ ಪ್ರದರ್ಶಿಸಲಿ ಅಥ–'ವಾ ರಚಿಸಲಿ ನಂದಿ ವಿಗ್ರಹ, ಮೇಲೆ ಚಂದ್ರ, ಸೂರ್ಯ ಚಿಹ್ನೆ, ಕೆಳಗೆ ಖಡ್ಗ ಮತ್ತು ಮುಂದೆ ಶಿವಲಿಂಗ ಇರಲೇಬೇಕು. ಕಿತ್ತೂರು ಪ್ರಾಧಿಕಾರದ ವತಿಯಿಂದ ಮಹಾದ್ವಾರದ ಮಧ್ಯೆದ ಕಂಬದ ಮೇಲೆ ಮತ್ತು ಲೋಕೋಪಯೋಗಿ ಇಲಾಖೆ ಅಥವಾ ಗುತ್ತಿಗೆದಾರನಿಂದ ಗಡಾದ ಮರಡಿಗೆ ಹೋಗುವ ಮುಖ್ಯಗೇಟಿನ ಮೇಲೆ ಚಿತ್ರಿಸಿರುವ ಲಾಂಛನ ಸರಿಪಡಿಸಬೇಕು' ಎಂದು ಅವರು ಆಗ್ರಹಿಸಿದರು.

# ಸಮಾಜ ಸುಧಾರಣೆಯ ಅವಕಾಶ ಬಳಸಿಕೊಳ್ಳಿ: ಐಜಿಪಿ ವಿಕಾಶಕುಮಾರ್ ವಿಕಾಶ್

ಬೆಳಗಾವಿ: 'ಸಮಾಜ ಸುಧಾರಣೆಗೆ ಪೊಲೀಸ್ ಇಲಾಖೆಯಲ್ಲಿ ಎಲ್ಲ ಹಂತದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಅವಕಾಶಗಳಿವೆ. ಇದರ ಸದ್ಬಳಕೆ ಮಾಡಿಕೊಳ್ಳಬೇಕು. ಸೈಬರ್ ಸೇರಿದಂತೆ ಯಾವುದೇ ಅಪರಾಧಗಳು ನಡೆಯದಂತೆ ಕ್ರಮ ವಹಿಸಬೇಕು' ಎಂದು ಉತ್ತರ ವಲಯ ಐಜಿಪಿ ವಿಕಾಶಕುಮಾರ್ ವಿಕಾಶ್ ಹೇಳಿದರು.

ಇಲ್ಲಿನ ಪೊಲೀಸ್ ಕವಾಯತು ಮೈದಾನದಲ್ಲಿ ನಗರ ಪೊಲೀಸ್ ಕಮಿಷನರೇಟ್ ಹಾಗೂ ಜಿಲ್ಲಾ ಪೊಲೀಸ್ ಮಂಗಳವಾರ ಆಯೋಜಿಸಿದ್ದ ರಾಜ್ಯ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

'ಬೇರೆ ಇಲಾಖೆಗಳಿಗೆ ಹೋಲಿಸಿದರೆ, ಪೊಲೀಸ್ ಇಲಾಖೆ ಉತ್ತಮ. ಹಾಗಾಗಿ ತಮ್ಮ ಕೆಲಸದ ಬಗ್ಗೆ ಗೌರವ ಇರಬೇಕು. ಆರಕ್ಷಕರು ಇರದಿದ್ದರೆ, ಸಮಾಜದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಡುತ್ತದೆ. ಅಶಾಂತಿ ಉಂಟಾಗುತ್ತದೆ. ಹಾಗಾಗಿ ಜನರೊಂದಿಗೆ ಸೌಜನ್ಯದಿಂದ ವರ್ತಿಸಿ, ಆರೋಗ್ಯಕರ ಸಮಾಜ ಕಟ್ಟಲು ಕೈಜೋಡಿಸಬೇಕು' ಎಂದು ಕರೆ ನೀಡಿದರು.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, 'ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದವರು ಮತ್ತು ಅವರ ಕುಟುಂಬದವರಿಗೆ ಗೌರವ ಸಲ್ಲಿಸುವ ಉದ್ದೇಶದಿಂದ ರಾಜ್ಯ ಪೊಲೀಸ್ ದಿನ ಆಚ–ರಿಸಲಾಗುತ್ತದೆ' ಎಂದರು.

ನಿವೃತ್ತ ಎಎಸ್ಐ ಮದರಸಾಬ್ ವಣ್ಣೂರ ಮಾತನಾಡಿದರು. ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಡಿಸಿಪಿ ರೋಹನ ಜಗದೀಶ್ ಇತರರಿದ್ದರು.

ಬೆಳಗಾವಿಯ ಸಿಎಆರ್ ತುಕಡಿ, ಡಿಎಆರ್ ತುಕಡಿ, ಜಿಲ್ಲಾ ನಾಗರಿಕ ತುಕಡೆ ಮತ್ತು ಕೆಎಆರ್ಪಿ ತುಕಡಿಯವರು ಆಕರ್ಷಕ ಪಥ–'ಸಂಚಲನ ನಡೆಸಿದರು.

# ಹುಲ್ಲೋಳಿ ಅರಿಹಂತ ಬ್ಯಾಂಕ್‌ಗೆ 6.64 ಕೋಟಿ ರೂ. ಲಾಭ: ಅಧ್ಯಕ್ಷ ಬಿ.ಬಿ. ಚೌಗಲಾ

ಹುಕ್ಕೇರಿ: ಈ ಭಾಗದ ಜನರ ಆರ್ಥಿಕ ಸುಧಾರಣೆಗೆ ಕಳೆದ ಎರಡು ದಶಕಗಳ ಹಿಂದೆ ಜನ್ಮ ತಳೆದ ಹುಕ್ಕೇರಿ ತಾಲೂಕಿನ ಹುಲ್ಲೋಳಿ ಅರಿಹಂತ ಸೌಹಾರ್ದ ಸಹಕಾರಿ ಸಂಘ ಇಂದು ಹೆಮ್ಮರವಾಗಿ ಬೆಳೆದಿದ್ದು ಕಳೆದ ಆರ್ಥಿಕ ವರ್ಷದಲ್ಲಿ 6.64 ಕೋಟಿ ರೂ ನಿವ್ವಳ ಲಾಭ ಗಳಿಸಿದೆ ಎಂದು ಬ್ಯಾಂಕ್ ಅಧ್ಯಕ್ಷ ಬಿ.ಬಿ.ಚೌಗಲಾ ಹೇಳಿದರು.

ಬ್ಯಾಂಕ್‌ನ ಪ್ರಧಾನ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಧುನಿಕ ಸೌಲಭ್ಯಗಳೊಂದಿಗೆ ಗ್ರಾಹಕ–ಸದಸ್ಯರಿಗೆ ತ್ವರಿತಗತಿಯಲ್ಲಿ ಸೇವೆ ಸಲ್ಲಿಸಲಾಗುತ್ತಿದೆ. ಈ ಮೂಲಕ ಬ್ಯಾಂಕ್ ಪ್ರಗತಿಯತ್ತ ಸಾಗಿ ಜನಸ್ನೇಹಿ ಆಡಳಿತಕ್ಕೆ ಹೆಸರುವಾಸಿಯಾಗಿದೆ ಎಂದರು.



ಬ್ಯಾಂಕ್ ಒಟ್ಟು 16,600 ಜನ ಸದಸ್ಯರನ್ನು ಹೊಂದಿದ್ದು ಪ್ರಧಾನ ಕಚೇರಿ ಸೇರಿ ಒಟ್ಟು 10 ಶಾಖೆಗಳಿವೆ.

ಒಟ್ಟು 1646 ಕೋಟಿ ರೂ ವಹಿವಾಟು ನಡೆಸಿದ್ದು 1 ಕೋಟಿ ಶೇರು ಬಂಡವಾಳವಿದೆ. 25 ಕೋಟಿ ಕಾಯ್ದಿಟ್ಟ ಹಾಗೂ ಇತರೆ ನಿಧಿಗಳಿದ್ದು 280 ಕೋಟಿ ದುಡಿಯುವ ಬಂಡವಾಳವಿದೆ. 193 ಕೋಟಿ ರೂ ಸಾಲ ವಿತರಿಸಲಾಗಿದ್ದು 254 ಕೋಟಿ ರೂ ಠೇವುಗಳಿವೆ. 85 ಕೋಟಿ ಗುಂತಾವಣೆಗಳಿದ್ದು ಕಳೆದ ಆರ್ಥಿಕ ವರ್ಷದ 31 ಮಾರ್ಚ್ 2024ರವರೆಗೆ ಸುಮಾರು 6.64 ಕೋಟಿ ರೂ ನಿವ್ವಳ ಲಾಭ ಗಳಿಸಿದೆ ಎಂದು ಅವರು ವಿವ–ರಿಸಿದರು.

ಶೇ. 99 ರಷ್ಟು ಸಾಲ ವಸೂಲಾತಿಯಾಗಿದ್ದು ಶೇ.25 ರಷ್ಟು ಲಾಭಾಂಶ ವಿತರಿಸಲಾಗಿದ್ದು ಸಹಕಾರಿ ಕ್ಷೇತ್ರದೊಂದಿಗೆ ಬ್ಯಾಂಕ್ ಶೈಕ್ಷಣಿಕ, ಸಾಮಾಜಿಕ ರಂಗದಲ್ಲಿಯೂ ಅನನ್ಯ ಸೇವೆಯಲ್ಲಿ ತೊಡಗಿಸಿಕೊಂಡಿದೆ. ಜೊತೆಗೆ ಅನೇಕ ಜನಪರ, ಸದಸ್ಯ–ಗ್ರಾಹಕ ಸ್ನೇಹಿ ಯೋಜನೆಗಳನ್ನು ಜಾರಿಗೊಳಿಸಿದೆ.

ಆಡಳಿತ ಮಂಡಳಿಯ ಸೂಕ್ತ ಮಾರ್ಗದರ್ಶನ ಮತ್ತು ಸಿಬ್ಬಂದಿಗಳ ದಕ್ಷ, ಪ್ರಾಮಾಣಿಕ ಸೇವೆಯಿಂದ ಬ್ಯಾಂಕ್ ಪ್ರಗತಿಯತ್ತ ಸಾಗಿದೆ ಎಂದು ಅವರು ಹೇಳಿದರು.

ಪ್ರಧಾನ ಕಾರ್ಯದರ್ಶಿ ಆನಂದ ಚೌಗಲಾ ಮಾತನಾಡಿ, ಈ ಭಾಗದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವುದನ್ನು ಪರಿಗಣಿಸಿ ಬ್ಯಾಂಕ್‌ಗೆ ಸಹಕಾರ ಶ್ರೀ ಆದರ್ಶ ಸಂಸ್ಥೆ ಪುರಸ್ಕಾರ, ಉತ್ತಮ ಸೌಹಾರ್ದ ಸಹಕಾರಿ ಪ್ರಶಸ್ತಿ ಲಭಿಸಿವೆ. ಗ್ರಾಹಕ ಸದಸ್ಯರು–ಆಡಳಿತ ಮಂಡಳಿ ಸಿಬ್ಬಂದಿ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಗ್ರಾಹಕರೇ ಬ್ಯಾಂಕಿನ ಆಧಾರಸ್ತಂಭ ಎಂದರು.

ಉಪಾಧ್ಯಕ್ಷ ಬಾಹುಬಲಿ ನಾಗನೂರಿ, ನಿರ್ದೇಶಕರಾದ ರಾಮಣ್ಣಾ ಗೋಟೂರಿ, ಜಯಪಾಲ ಚೌಗಲಾ, ರವೀಂದ್ರ ಚೌಗಲಾ, ಮಾಯಪ್ಪಾ ಹೊಳೆಪ್ಪಗೋಳ, ಶೃತಿ ಅಶೋಕ ಪಾಟೀಲ, ಪಿ.ಆರ್.ಚೌಗಲಾ, ಜಿನ್ನಪ್ಪಾ ಸಪ್ತಸಾಗರ, ಬಸವರಾಜ ಪಾಟೀಲ, ಭೂಪಾಲ ಚೌಗಲಾ, ಬಾಳಪ್ಪಾ ಸಂಕೇಶ್ವರಿ, ಅಶೋಕ ಚೌಗಲಾ, ಬಾಬು ಅಕ್ಕಿವಾಟೆ, ಸುಮತಿ ಚೌಗಲಾ ಮತ್ತಿತರರು ಉಪಸ್ಥಿತರಿದ್ದರು. ಪ್ರಧಾನ ಕಾರ್ಯದರ್ಶಿ ಆನಂದ ಚೌಗಲಾ ನಿರೂಪಿಸಿದರು. ಮಹಾವೀರ ಚೌಗಲಾ ಸ್ವಾಗತಿಸಿದರು. ಅಜೀತ ಚೌಗಲಾ ವಂದಿಸಿದರು.

# ರಾಮದುರ್ಗ ಕೆರೆಗಳ ತುಂಬಿಸಲು ಪ್ರಯತ್ನ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ರಾಮದುರ್ಗ: ರಾಮದುರ್ಗ ಭಾಗದ ಜನರ ಬಹುದಿನಗಳ ಬೇಡಿಕೆಯಾದ ಕೆರೆ ತುಂಬಿಸುವ ಯೋಜನೆಗೆ ಶಾಸಕ ಅಶೋಕ್ ಪಟ್ಟಣ್ ನೇತೃತ್ವದಲ್ಲಿ ಪ್ರಯತ್ನಿಸಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭರವಸೆ ನೀಡಿದರು.

ಚುನಾವಣೆ ಮುಗಿದ ಕೂಡಲೇ ಹೊಸ ಸಂಸತ್ ಸದಸ್ಯರ ಮೊದಲ ಕೆಲಸವೇ ಡಿ.ಕೆ.ಶಿವಕುಮಾರ್ ಅವರ ಬಳಿ ನಿಯೋಗ ಕೊಂಡೊಯ್ದು ಕೆರೆ ತುಂಬಿಸುವ ಯೋಜನೆಗೆ ಮಂಜೂರು ಮಾಡಿಸುವುದು ಎಂದು ಹೇಳಿದರು.

ರಾಮದುರ್ಗ ವಿಧಾನಸಭಾ ಕ್ಷೇತ್ರದ ಕೆ ಚಂದರಗಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ನಡೆಸಿದ ಸಚಿವರು, ಬದ್ಧತೆಗೆ ಮತ್ತೊಂದು ಹೆಸರು ಕಾಂಗ್ರೆಸ್ ಪಕ್ಷ, ಕಳೆದ 10 ತಿಂಗಳಲ್ಲಿ ನುಡಿದಂತೆ ನಡೆದಿದ್ದೇವೆ ಎಂದು ಹೇಳಿದರು.



10 ವರ್ಷಗಳ ಹಿಂದೆ ನನ್ನ ಪರವಾಗಿ ನಿವೆಲ್ಲರೂ ಓಡಾಡಿದರೂ ನಾನು ಸೋಲಬೇಕಾಯಿತು. ಇದೀಗ 10 ವರ್ಷಗಳ ಬಳಿಕ ಮಗನೊಂದಿಗೆ ಬಂದಿದ್ದೇನೆ. ರಾಮದುರ್ಗದ ಜನರ ಸೇವೆ ಮಾಡಲು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು. ಈ ಭಾಗದ ಜನರ ಬಹುದಿನಗಳ ಬೇಡಿಕೆಯಾಗಿರುವ ಕೆರೆ ತುಂಬಿಸುವ ಯೋಜನೆಗೆ ಚುನಾವಣೆ ಮುಕ್ತಾಯದ ಬಳಿಕ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

2023ರ ಚುನಾವಣೆಗೂ ಮುನ್ನ ಐದು ಗ್ಯಾರಂಟಿ ಯೋಜನೆಗಳ ಭರವಸೆ ನೀಡಿದ್ದೇವು. ಇದೀಗ ಕೊಟ್ಟ ಮಾತನ್ನು ಈಡೇರಿಸಿದ್ದೇವೆ.

ನಿಮ್ಮೆಲ್ಲರ ಆಶೀರ್ವಾದ ಕಾಂಗ್ರೆಸ್ ಅಭ್ಯರ್ಥಿಗೆ ಇರಲಿ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕೋರಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ಉದಯಕುಮಾರ್ ಸೋಮನಟ್ಟಿ, ಸಂಗಪ್ಪ ಅಡಗಿಮನಿ, ಸಂಜಯ ಹಳ್ಳಿ, ಭೀಮಪ್ಪ ಡವಳೇಶ್ವರ, ಪರ್ವತಗೌಡ ಪಾಟೀಲ, ಶಿವಪ್ಪ ಮುನವಳ್ಳಿ, ಬಾಪು ದೇಸಾಯಿ, ನಿಂಗಣ್ಣ ದಂಡಿನದುರ್ಗಿ, ಭೀಮಪ್ಪ ಅಡಗಿಮನಿ ಹಾಗೂ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ವಸತಿ ಶಾಲೆ ವಿದ್ಯಾರ್ಥಿಗಳು ಪಾಲಕರಿಗೆ ಪತ್ರ ಬರೆಯುವ ಮೂಲಕ ತಪ್ಪದೇ ಮತದಾನ ಮಾಡುವಂತೆ ಮನವಿ




ಧಾರವಾಡ: ಪ್ರೀತಿಯ ತಂದೆಯವರಿಗೆ, ತಾಯಿಯವರಿಗೆ, ಅಣ್ಣಂದಿರಿಗೆ, ಅಕ್ಕಂದಿರಿಗೆ ನಮ್ಮ ಮುಂದಿನ ಭವಿಷ್ಯದ ಹಿತದೃಷ್ಟಿಯಿಂದ ಬರುವ ಮೇ. 7 ರಂದು ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡುವಂತೆ ವಸತಿ ಶಾಲೆಗಳ ವಿದ್ಯಾರ್ಥಿಗಳು ಪಾಲಕರಿಗೆ ಪತ್ರ ಬರೆಯುವ ಮೂಲಕ ಮತದಾನ ಜಾಗೃತಿ ಮೂಡಿಸಿದರು.

ಧಾರವಾಡದ ಪೋಸ್ಟ ಮ್ಯಾಟ್ರಿಕ್ ವಸತಿ ಶಾಲೆಗಳಲ್ಲಿರುವ ವಿದ್ಯಾರ್ಥಿಗಳು ತಮ್ಮ ಪಾಲಕ–ರಿಗೆ ಮತದಾನದಿಂದ ದೂರ ಉಳಿಯದೇ ನಿಮ್ಮ ಮತದಾನದ ಹಕ್ಕನ್ನು ಚಲಾಯಿಸಿ. ಸದೃಢ ಭಾರತ ನಿರ್ಮಾಣಕ್ಕೆ ಕೈ ಜೋಡಿಸಿರಿ ಎಂದು ಪತ್ರಗಳ ಮೂಲಕ ಮನವಿ ಮಾಡಿದ್ದಾರೆ.


ಮೂರ್ನಾಲ್ಕು ದಶಕಗಳ ಹಿಂದೆ ಜನರಿಗೆ ಪತ್ರಗಳಿಂದ ಬೇರೆ ಬೇರೆ ಸ್ಥಳಗಳಲ್ಲಿ ನಡೆಯುವ ವಿದ್ಯಮಾನಗಳ ಬಗ್ಗೆ ಮಾಹಿತಿ ದೊರೆಯುತ್ತಿತ್ತು. ಇಂದು ಮೊಬೈಲ್, ಅಂತರ್ಜಾಲ, ಮಾಹಿತಿ ತಂತ್ರಜ್ಞಾನ ಬೆಳವಣಿಗೆಯಿಂದ ಕ್ಷಣಾರ್ಧದಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ. ಮಕ್ಕಳು ತಮ್ಮ ಪಾಲಕರಿಗೆ ಪತ್ರ ಬರೆಯುವುದರ ಮೂಲಕ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರಣೆ ನೀಡಿದ್ದಾರೆ.

ಮಕ್ಕಳ ಪತ್ರ ಬರೆದಿರುವುದನ್ನು ಓದಿದಾಗ ಪಾಲಕರಿಗೆ ಖುಷಿ ನೀಡಲಿದೆ. ಅಲ್ಲದೇ ತಪ್ಪದೇ ಮತ ಚಲಾಯಿಸುವುದರಿಂದ, ಮತದಾನ ಪ್ರಮಾಣ ಹೆಚ್ಚಳವಾಗಲಿದೆಯೆಂದು

ಸ್ವೀಪ್ ನೋಡಲ್ ಅಧಿಕಾರಿಗಳು ಆಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ.ಟಿ.ಕೆ ಅವರು ಮಾತನಾಡಿದರು.

ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ದೀಪಕ ಮಡಿವಾಳರ, ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಗೋಪಾಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಜ–ರಿದ್ದರು.

# ತಾತ ಕೊರೆಸಿದ್ದ ಕೊಳವೆ ಬಾವಿಗೆ ಬಿದ್ದ 2 ವರ್ಷದ ಮೊಮ್ಮಗ; ಪೋಷಕರ ಆಕ್ರಂದನ



ವಿಜಯಪುರ: ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಲಚ್ಯಾಣ ಗ್ರಾಮದ ಸಮೀಪ ಜಮೀನಿನಲ್ಲಿ ಕೊರೆಸಿದ್ದ ತೆರೆದ ಕೊಳವೆ ಬಾವಿಗೆ ಎರಡು ವರ್ಷದ ಮಗು ಬಿದ್ದಿರುವ ಘಟನೆ ನಡೆದಿದೆ.

ಮಂಗಳವಾರ ಕೊಳವೆ ಬಾವಿಯನ್ನು ಕೊರೆಸಲಾಗಿತ್ತು. ಆದರೆ ನೀರು ಬರದ ಹಿನ್ನಲೆಯಲ್ಲಿ ಅದನ್ನು ಹಾಗೆ ಬಿಡಲಾಗಿತ್ತು. ಶಂಕರಪ್ಪ ಅವರು ತಮ್ಮ ಜಮೀನಿನಲ್ಲಿ ಕೊಳವೆ ಬಾವಿ ಕೊರೆಸಿದ್ದರು. ಇಂದು ಆಟವಾಡಲು ಹೋಗಿದ್ದ ವೇಳೆ ಶಂಕರಪ್ಪ ಅವರ ಮೊಮ್ಮಗ ಸ್ವಾತಿಕ್ ಆಯತಪ್ಪಿ ಬೋರ್ ವೆಲ್ ಗೆ ಬಿದ್ದಿದ್ದಾನೆ. ಸಾತ್ವಿಕ್ ರಕ್ಷಣೆಗೆ ಬಿರುಸಿನ ಕಾರ್ಯಾಚರಣೆ ಆರಂಭಿಸಲಾಗಿದೆ.

ಇಂಡಿ ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ವಿಷಯ ತಿಳಿಯುತ್ತಿದ್ದಂತೆ ಪೊಲೀಸರು ಘಟನಾ ಸ್ಥಳಕ್ಕೆ ದೌಡಾಯಿಸಿದ್ದು ರಕ್ಷಣಾ ಕಾರ್ಯಾಚರಣೆಗೆ ಮುಂದಾಗಿದ್ದಾರೆ.

ಸಹಾಯಕ ಕಮಿಷನರ್ ಅಬಿದ್ ಗದ್ಯಾಲ್ ಅವರು, ಸಂಜೆ 6 ಗಂಟೆ ಸುಮಾರಿಗೆ ಬಾಲಕ ಬಿದ್ದಿದ್ದಾನೆ. ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಪೊಲೀಸರು, ಕಂದಾಯ ಅಧಿಕಾರಿಗಳು, ಅಗ್ನಿಶಾಮಕ ಮತ್ತು ತುರ್ತು ರಕ್ಷಣಾ ಸಿಬ್ಬಂದಿಯ ತಂಡವನ್ನು ರವಾನಿಸಿದ್ದೇವೆ. ವೈದ್ಯರು ಆಮ್ಲಜನಕದ ಪೂರೈಕೆಯನ್ನೂ ಮಾಡುತ್ತಿದ್ದಾರೆ. ಇದಲ್ಲದೇ, ಈಗಾಗಲೇ ಜೆಸಿಬಿಗಳು ಸಮಾನಾಂತರವಾಗಿ ಅಗೆಯುವ ಕೆಲಸ ಆರಂಭಿಸಲಾಗಿದೆ ಎಂದರು.

ಪ್ರಾಥಮಿಕ ವರದಿಯ ಪ್ರಕಾರ, ಬಾಲಕ ಸುಮಾರು 20 ಅಡಿ ಆಳದಲ್ಲಿ ಸಿಲುಕಿಕೊಂಡಿದ್ದಾನೆ ಎಂದು ಗದ್ಯಾಲ್ ಹೇಳಿದ್ದಾರೆ. ಬಾಲಕನನ್ನು ರಕ್ಷಿಸುವ ಪ್ರಯತ್ನ ನಡೆಯುತ್ತಿದೆ ಎಂದು ಹೇಳಿದರು.

# ಜನರ ಸೇವೆ ಮಾಡಲು ಸಹೋದರಿ ಪ್ರಿಯಂಕಾಗೆ ಮತ ನೀಡಿ: ಯುವ ನಾಯಕ್ ರಾಹುಲ್ ಜಾರಕಿಹೊಳಿ



ಬೆಳಗಾವಿ: ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿರುವ ಸಹೋದರಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಆಶೀರ್ವದಿಸುವ ಮೂಲಕ ಚಿಕ್ಕೋಡಿಯ ನೂತನ ಸಂಸದೆಯಾಗಿ ಆಯ್ಕೆಮಾಡಿ ಎಂದು ಕಾರ್ಯಕರ್ತರಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ ರಾಯಬಾಗ ತಾಲೂಕಿನ ಖೈರಕೋಡಿ ಗ್ರಾಮದಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಪ್ರಚಾರ ಸಭೆ ಯಲ್ಲಿ ಭಾಗವಹಿಸಿ ಅವರು ಮಾತನಾಡಿ, ಸಹೋದರಿ ಪ್ರಿಯಂಕಾ ಕಳೆದ ನಾಲ್ಕು ವರ್ಷಗಳಿಂದ ಸಾಮಾಜಿ–ಕ ಕೆಲಸಗಳನ್ನು ಮಾಡುತ್ತಾ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ.

ಈ ಭಾರಿ ಚಿಕ್ಕೋಡಿ ಲೋಕಸಭಾ ಕ್ಷೇತ್ರವನ್ನು ಅಭಿವೃದ್ಧಿಗೊಳಿಸಲು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವ–ರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಮತ ನೀಡಬೇಕೆಂದು ಮನವಿ ಮಾಡಿದರು.


ಬಡವರ ಪರವಾದ ಕಾರ್ಯಕ್ರಮ ನೀಡುವುದು ಕಾಂಗ್ರೆಸ್ ಪಕ್ಷ ಮಾತ್ರ. ಇದನ್ನು ಮತದಾರರು ಬೆಂಬಲಿಸುವ ಮೂಲಕ ಪಕ್ಷ ಕ್ಕೆ ಶಕ್ತಿ ತುಂಬುವ ಕೆಲಸ ಮಾಡಬೇಕು. "ನಮ್ಮ ಸರ್ಕಾರ ಬಡವರ ಪರವಾಗಿದ್ದು, ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದೆ. ಅಧಿಕಾರಕ್ಕೆ ಬಂದ 10 ತಿಂಗಳಲ್ಲೇ ಘೋಷಿಸಿದ್ದ ಎಲ್ಲಾ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದೆ, ಇದು ನಮ್ಮ ಸರ್ಕಾರದ ಹೆಗ್ಗಳಿಕೆಯಾಗಿದೆ ಎಂದರು. ಈ ಸಂದರ್ಭದಲ್ಲಿ ಖೈರಕೋಡಿ ಗ್ರಾಮದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಬಿಜೆಪಿ ಸಂಸದರ ವೈಫಲ್ಯ ಜನರಿಗೆ ತಿಳಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

## ರಾಮಾಪೂರ, ಮಾಸ್ತಿಹೊಳಿಹಾಗೂ ಕಬಲಾಪೂರ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾದ ಕಾಂಗ್ರೆಸ ಕಾರ್ಯಕರ್ತರ ಸಭೆ

ಬೆಳಗಾವಿ: ಕಾಂಗ್ರೆಸ್ ಕಾರ್ಯಕರ್ತರು ಮನೆ ಮನೆಗೆ ತೆರಳಿ ಬಿಜೆಪಿ ಸಂಸದರ ವೈಫಲ್ಯಗಳನ್ನು ತಿಳಿಸಿ ಹೆಮ್ಮೆಯಿಂದ ಕೈ ಅಭ್ಯರ್ಥಿ ಪರ ಮತಯಾಚಿಸಿ ನನ್ನನ್ನು ಗೆಲ್ಲಿಸುವಂತೆ ಮಾಡಬೇಕು ಎಂದು ಚಿಕ್ಕೋಡಿ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣೆ ಪ್ರಯುಕ್ತ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹುದಲಿ ಜಿಲ್ಲಾ ಪಂ ವ್ಯಾಪ್ತಿಯ ರಾಮಾಪೂರ. ಮಾಸ್ತಿಹೊಳಿ.ಹಾಗೂ ಕಬಲಾಪೂರ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾದ ಕಾಂಗ್ರೆಸ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ಕಳೆದ 6 ವರ್ಷಗಳಲ್ಲಿ ಬಿಜೆಪಿ ಸಂಸದ ಅವರು ಸಂಪೂರ್ಣವಾಗಿ ವಿಫಲರಾಗಿದ್ದಾರೆ. ಕೇಂದ್ರ ಸರ್ಕಾರದ ದುರಾಡಳಿತದಿಂದ ನೊಂದ ಜನರಿಗೆ ನಮ್ಮ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ನೆಮ್ಮದಿ ದೊರಕಿದ್ದು, ನಮ್ಮ ಕಾರ್ಯಕರ್ತರು ಮನೆ ಮನೆಗೆ ತೆರಳಿ ಬಿಜೆಪಿ ಸಂಸದರ ವೈಫಲ್ಯಗಳನ್ನು ತಿಳಿಸಲು ಮುಂದಾಗಬೇಕು ಎಂದರು.



ಕಾಂಗ್ರೆಸ್ ಯೋಜನೆಗಳ ಫಲಾನುಭವಿಗಳಿಗೆ ಸರ್ಕಾರ ಜಾ–ರಿಗೆ ತಂದಿರುವ ಯೋಜನೆಗಳ ಅರಿವು ಮೂಡಿಸುವ ಮಹತ್ತರವಾದ ಜವಾಬ್ದಾರಿ ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತೆಯರ ಮೇಲಿದೆ ಎಂದ ಅವರು, ದೇಶದ ಭದ್ರ ಬುನಾದಿಗೆ ಯುವಕರು ರಾಜಕೀಯಕ್ಕೆ ಬರಬೇಕಾಗಿದೆ. ಹೀಗಾಗಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಅವಕಾಶ ಸಿಕ್ಕಿದೇ , ಕ್ಷೇತ್ರದ ಜನರ ಸೇವೆ ಮಾಡಲು ಮತದಾರರು ನನಗೆ ಆಶೀರ್ವಾದ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕ ಅರವಿಂದ ಕಾರ್ಚಿ ಹಾಗೂ ಗ್ರಾಮದ ಪ್ರಮುಖ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಐಪಿಓ ಅನುಮತಿಗೆ ಇಕೋಸ್ (ಇಂಡಿಯಾ) ಮೊಬಿಲಿಟಿ ಪ್ರಸ್ತಾವನೆ ಸಲ್ಲಿಕೆ

ಹುಬ್ಬಳ್ಳಿ: ಕಾರ್ಪೊರೇಟ್ ಕಂಪನಿಗಳಿಗೆ ಚಾಲಕಸಹಿತ ಬಾಡಿಗೆ ವಾಹನ ಸೌಲಭ್ಯ ಒದಗಿಸುವ ಭಾರತದ ಅತಿದೊಡ್ಡ ಮತ್ತು ಲಾಭದಾಯಕ ಸಂಸ್ಥೆಯಾಗಿರುವ ಇಕೋಸ್ (ಇಂಡಿಯಾ) ಮೊಬಿಲಿಟಿ ಆ್ಯಂಡ್ ಹಾಸ್ಪಿಟ್ಯಾಲಿಟಿ ಲಿಮಿಟೆಡ್, ಪ್ರಾಥಮಿಕ ಮಾರುಕಟ್ಟೆಯಿಂದ ಬಂಡವಾಳ ಸಂಗ್ರಹಿಸಲು ಅನುಮತಿ ನೀಡಬೇಕು ಎಂದು ಭಾರತದ ಷೇರು ನಿಯಂತ್ರಣ ಮಂಡಳಿಗೆ (ಸೆಬಿ) ಕರಡು ಪ್ರಸ್ತಾವ ಸಲ್ಲಿಸಿದೆ.

ಕಾರ್ಯಾಚರಣೆಗಳಿಂದ ಗಳಿಸಿದ ವರಮಾನ ಮತ್ತು ಹಣಕಾಸು 2023ರಲ್ಲಿ ತೆರಿಗೆ ಪಾವತಿ ನಂತರದ ಲಾಭದ ಲೆಕ್ಕಾಚಾರದಲ್ಲಿ ಇದೊಂದು ಲಾಭದಾಯಕ ಕಂಪನಿಯಾಗಿದೆ. ತಲಾ ರೂ 2 ಮುಖಬೆಲೆಯ 1,80,00,000 ವರೆಗಿನ ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಗೆ (ಐಪಿಒ) ಅನುಮತಿ ನೀಡಲು 'ಸೆಬಿ'ಗೆ ಕರಡು ಪ್ರಸ್ತಾವ ಸಲ್ಲಿಸಿದೆ.

ರಾಜೇಶ್ ಲೂಂಬಾ, ಆದಿತ್ಯ ಲೂಂಬಾ, ರಾಜೇಶ್ ಲೂಂಬಾ ಫ್ಯಾಮಿಲಿ ಟ್ರಸ್ಟ್ ಮತ್ತು ಆದಿತ್ಯ ಲೂಂಬಾ ಫ್ಯಾಮಿಲಿ ಟ್ರಸ್ಟ್ ಈ ಕಂಪನಿಯ ಪ್ರವರ್ತಕರಾಗಿದ್ದಾರೆ.

ಈ ಕೊಡುಗೆಯು ರಾಜೇಶ್ ಲೂಂಬಾ ಅವರ 99,00,000 ವರೆಗಿನ ಈಕ್ವಿಟಿ ಷೇರುಗಳು ಮತ್ತು ಆದಿತ್ಯ ಲೂಂಬಾ ಅವರ 81,00,000 ವರೆಗಿನ ಸೇರಿದಂತೆ 1,80,00,000 ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ ಒಳಗೊಂಡಿದೆ.

ಕಂಪನಿಯು 25 ವರ್ಷಗಳಿಂದ ಭಾರತದಲ್ಲಿ ಫಾರ್ಚೂನ್ 500 ಕಂಪನಿಗಳು ಸೇರಿದಂತೆ ತನ್ನೆಲ್ಲ ಕಾರ್ಪೊರೇಟ್ ಗ್ರಾಹಕರಿಗೆ ಚಾಲಕ ಸಹಿತ ಕಾರ್ ಬಾಡಿಗೆ (ಸಿಸಿಆರ್) ಮತ್ತು ಉದ್ಯೋಗಿ ಸಾರಿಗೆ ಸೌಲಭ್ಯದ (ಇಟಿಎಸ್) ಸೇವೆಗಳನ್ನು ಒದಗಿಸುತ್ತಿದೆ. ಕಂಪನಿಯು ವಿವಿಧ ಬಗೆಯ ವಾಹನ ಬ್ರ್ಯಾಂಡ್‌ಗಳಾದ ಔಡಿ, ಬಿಎಂಡಬ್ಲ್ಯು ಮತ್ತು ಮರ್ಸಿಡಿಸ್–ಬೆಂಜ್ ಸೇರಿದಂತೆ 9,000 ಕ್ಕೂ ಹೆಚ್ಚಿನ ಅಗ್ಗದ, ಐಷಾರಾಮಿ ಹಾಗೂ ಪ್ರೀಮಿಯಂ ವಾಹನ, ವಿವಿಧ ಬಗೆಯ ಕಾರ್, ಮಿನಿ ವ್ಯಾನ್ ಮತ್ತು ಬಸ್‌ಗಳ ಸೇವೆ ಒದಗಿಸುತ್ತಿದೆ.

ಇದು ವಿಶೇಷ ವಾಹನಗಳಾದ ಲಗೇಜ್ ವ್ಯಾನ್‌ಗಳು, ಹೆಚ್ಚು ಆರಾಮದಾಯಕ ದೊಡ್ಡ ಕಾರ್, ಹಳೆಯ ಕಾರುಗಳು ಮತ್ತು ಅಂಗವಿಕಲರು ಸುಲಭವಾಗಿ ಹತ್ತಬಹುದಾದ ಸಾರಿಗೆ ವಾಹನಗಳನ್ನು ಒದಗಿಸುತ್ತದೆ.

ಕಂಪನಿಯು ಮಾಹಿತಿ ತಂತ್ರಜ್ಞಾನ, ಹೊರಗುತ್ತಿಗೆ, ಜಾಗತಿಕ ಸಾಮರ್ಥ್ಯ ಕೇಂದ್ರಗಳು, ಸಲಹಾ, ಆರೋಗ್ಯ, ಇ–ಕಾಮರ್ಸ್, ಔಷಧ, ಕಾನೂನು ಮತ್ತು ತಯಾರಿಕೆ ವಲಯಗಳು ಸೇರಿದಂತೆ ವೈವಿಧ್ಯಮಯ ಉದ್ದಿಮೆಗಳಿಗೆ ಸೇವೆ ಒದಗಿಸುತ್ತಿದೆ. ಈ ಎಲ್ಲ ವಲಯಗಳ ಪ್ರಮುಖ ಕಂಪನಿಗಳಾದ ಎಚ್‌ಸಿಎಲ್ ಕಾರ್ಪೊರೇಷನ್ ಪ್ರೈವೇಟ್ ಲಿಮಿಟೆಡ್, ಎಚ್‌ಡಿಎಫ್‌ಸಿ ಲೈಫ್ ಇನ್ಶುರನ್ಸ್ ಲಿಮಿಟೆಡ್, ಥಾಮಸ್ ಕುಕ್, ಡಬ್ಲ್ಯುಎಂ ಗ್ಲೋಬಲ್ ಟೆಕ್ನಾಲಜಿ ಸರ್ವಿಸಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ವಿಆರ್‌ಬಿ ಕನ್ಸುಮರ್ ಪ್ರಾಡಕ್ಟ್ಸ್ ಲಿಮಿಟೆಡ್, ಮೆಡ್‌ಜೆನೊಮ್ ಲ್ಯಾಬ್ಸ್ ಲಿಮಿಟೆಡ್, ಡ್ರೀಮ್‌ಫೋಕ್ಸ್ ಸರ್ವಿಸಸ್ ಲಿಮಿಟೆಡ್, ಮೆರ್ಸರ್ ಕನ್ಸಲ್ಟಿಂಗ್, ಎಫ್‌ಎನ್‌ಎಫ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಎಕ್ಸೆಲ್‌ಸರ್ವಿಸ್‌ಡಾಟ್‌ಕಾಂ (ಇಂಡಿಂ–ಯಾ) ಪ್ರೈವೇಟ್ ಲಿಮಿಟೆಡ್ ಮತ್ತು ವಿಎ ಟೆಕ್ ವಾಬ್ಯಾಗ್ ಲಿಮಿಟೆಡ್ ಸೇರಿದಂತೆ ಹಲವಾರು ಕಂಪನಿಗಳಿಗೆ ತನ್ನ ಸೇವೆಗಳನ್ನು ಒದಗಿಸುತ್ತದೆ.

ಈಕ್ವಿರಸ್ ಕ್ಯಾಪಿಟಲ್ ಪ್ರೈವೇಟ್ ಲಿಮಿಟೆಡ್ ಮತ್ತು ಐಐಎಫ್‌ಎಲ್ ಸೆಕ್ಯುರಿಟೀಸ್ ಲಿಮಿಟೆಡ್ ಈ ನೀಡಿಕೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

# ಎರಡು ಲಕ್ಷ ಮತಗಳಿಂದ ಮೃಣಾಲ್ ಹೆಬ್ಬಾಳ್ಕರ್‌ಗೆ ಗೆಲುವು: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿಶ್ವಾಸ

## ಕಾಂಗ್ರೆಸ್ ಸರ್ಕಾರ ಇರುವವರೆಗೂ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ; ಬದ್ಧತೆ ಇಲ್ಲದ ಬಿಜೆಪಿ ಅಭ್ಯರ್ಥಿ ಎಂದು ಟೀಕಿಸಿದ ಸಚಿವರು

ರಾಮದುರ್ಗ: ಗಂಡು ಮೆಟ್ಟಿನ ನಾಡು ಬೆಳಗಾವಿ ಜಿಲ್ಲೆಯ ಮಣ್ಣಿನ ಮಗ ಮೃಣಾಲ್ ಹೆಬ್ಬಾಳ್ಕರ್ ಎರಡು ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ವಿಶ್ವಾಸ ವ್ಯಕ್ತಪಡಿಸಿದರು. ರಾಮದುರ್ಗದ ರಾಠಿ ಫಾರ್ಮ್ ಹೌಸ್‌ನಲ್ಲಿ ಮಂಗಳವಾರ ನಡೆದ ಲೋಕಸಭಾ ಚುನಾವಣೆಯ ಸಮ್ಮಿಲ ಸ್ವಾಭಿಮಾನಿ ಪ್ರಚಾರ ಸಮಾವೇಶದಲ್ಲಿ ಮಾತನಾಡಿದ ಸಚಿವರು, ನಾವು ಹೋದಲೆಲ್ಲಾ ಕಾಂಗ್ರೆಸ್ ಪಕ್ಷಕ್ಕೆ ಅಭೂತ ಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ ಎಂದರು.

ನನ್ನ ಸ್ವಕ್ಷೇತ್ರ ಬೆಳಗಾವಿ ಗ್ರಾಮೀಣ ಕ್ಷೇತ್ರದಿಂದಲೇ 60 ಸಾವಿರಕ್ಕೂ ಅಧಿಕ ಮತಗಳು ಲೀಡ್, ಬೆಳಗಾವಿ ದಕ್ಷಿಣ, ಬೆಳಗಾವಿ ಉತ್ತರ ಕ್ಷೇತ್ರಗಳಿಂದ 85 ಸಾವಿರ ಮತಗಳ ಮುನ್ನಡೆ ಸಿಗುವ ವಿಶ್ವಾಸವಿದೆ. ರಾಮದುರ್ಗದಲ್ಲಿ ಸಿಕ್ಕಿರುವ ಬೆಂಬಲ ನೋಡಿದರೆ, ಕಾಂಗ್ರೆಸ್ ಅಭ್ಯರ್ಥಿ 2 ಲಕ್ಷ ಮತಗಳ ಅಂತರದಿಂದ ಗೆಲ್ಲುವ ವಿಶ್ವಾಸ ಮೂಡುತ್ತಿದೆ ಎಂದರು.

2014ರಲ್ಲಿ ನಾನು ಲೋಕಸಭೆಗೆ ನಿಂತಾಗ ಇಲ್ಲಿಯ ಜನರು ನನ್ನ ಪರವಾಗಿ ಸಾಕಷ್ಟು ಹೋರಾಟ ಮಾಡಿದ್ರು, ಇದೀಗ ಹತ್ತು ವರ್ಷಗಳ ಬಳಿಕ ನನ್ನ ಮಗ ಬಂದಿದ್ದಾನೆ. ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಿ. 2014ರಲ್ಲಿ ಎಲ್ಲರೂ ಶ್ರಮವಹಿಸಿದರೂ ಸೋತೆವು. ಆದ-ರೆ, ಈಗಿನ ಪರಿಸ್ಥಿತಿ ಭಿನ್ನವಾಗಿದೆ. ನಮ್ಮ ನಾಯಕ ಅಶೋಕ್ ಪಟ್ಟಣ್ ಅವರು ಕ್ಷೇತ್ರದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಅಭ್ಯರ್ಥಿ ಗೆಲುವಿಗೆ ಅನುಕೂಲವಾಗಲಿದೆ ಎಂದರು.

ನನಗೆ ಕೊಟ್ಟ ರೀತಿಯಲ್ಲೇ ನಿಮ್ಮ ಸೇವೆ ಮಾಡಲು ನನ್ನ ಮಗನಿಗೂ ಅವಕಾಶ ಮಾಡಿಕೊಡಿ ಎಂದರು ಹೇಳಿದರು.

ಕ್ಷೇತ್ರದ ಮನೆ ಮಗನಂತಿರುವ ಮೃಣಾಲ್ ಹೆಬ್ಬಾಳ್ಕರ್, ನಿಮ್ಮೆಲ್ಲರ ಮನೆ ಮಗನಾಗಿ ಕೆಲಸ ಮಾಡಲಿದ್ದಾನೆ. ಕ್ಷೇತ್ರದ ಸಮಸ್ಯೆಗಳು ಅವನಿಗೆ ಅರಿವಿದ್ದು, ನಿಮ್ಮೆಲ್ಲರ ಧ್ವನಿಯಾಗಿ ಕೆಲಸ ಮಾಡಲಿದ್ದಾನೆ ಎಂದರು.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಜಗದೀಶ್ ಶೆಟ್ಟರ್ ಸೋತರೂ ಮಾಜಿ ಮುಖ್ಯಮಂತ್ರಿ ಅಂತ ಹೇಳಿ ಅವರ ಹಿರಿತನಕ್ಕೆ ಗೌರವ ನೀಡಿ, ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿತ್ತು. ಏಕಾಏಕಿ ದೆಹಲಿಗೆ ಹೋದ ಶೆಟ್ಟರ್ ಬಿಜೆಪಿ ಸೇರ್ಪಡೆಗೊಂಡರು. ಇದೀಗ ಬೆಳಗಾವಿಯಿಂದ ಲೋಕಸಭೆ ಪ್ರವೇಶಿಸಲು ಕನಸು ಕಾಣುತ್ತಿದ್ದಾರೆ. ಬೆಳಗಾವಿಯಿಂದ ಸ್ಪರ್ಧಿಸಲು ಅವರಿಗೆ ಯಾವ ನೈತಿಕತೆ ಇದೆ ಎಂದು ಸಚಿವರು ಪ್ರಶ್ನಿಸಿದರು.

**ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ:**

ಕರ್ನಾಟಕದ ಏಳು ಕೋಟಿ ಜನರಿಗೆ ನಾನೊಬ್ಬಳೆ ಮಹಿಳಾ ಸಚಿವೆಯಾಗಿ ನಿಂತಿ-ದ್ದೇನೆ, ಇಂದು ರಾಜ್ಯಾದ್ಯಂತ ಸೇವೆ ಮಾಡುವ ಅವಕಾಶ ಲಭಿಸಿದೆ. ಇದು ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯ ಎಂದು ಹೇಳಿದರು.

ಕಳೆದ ವರ್ಷ ವಿಧಾನಸಭೆ ಚುನಾವಣೆ ಪೂರ್ವ ನಾವು ಪಂಚ ಯೋಜನೆಯ ಗ್ಯಾರಂಟಿ ಕಾರ್ಡ್‌ಗಳನ್ನು ಹಂಚಿದ್ದವು. ಸರ್ಕಾರ ರಚನೆಯಾದ ಬಳಿಕ ನುಡಿದಂತೆ ನಡೆದಿದ್ದೇವೆ.



ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕೊಟ್ಟ ಮಾತನ್ನು ಉಳಿಸಿಕೊಂಡಿದೆ ಎಂದು ಸಚಿವರು ತಿಳಿಸಿದರು.

ವಿರೋಧ ಪಕ್ಷಗಳು ಗ್ಯಾರಂಟಿ ಯೋಜನೆಗಳ ಬಗ್ಗೆ ಅಪಪ್ರಚಾರ ಮಾಡುತ್ತಿವೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ಕಾಂಗ್ರೆಸ್ ಸರ್ಕಾರ ಇರೋವರೆಗೂ ಯೋಜನೆಗಳು ಇರುತ್ತವೆ ಎಂದರು.

**ಅಶೋಕ್ ಪಟ್ಟಣ್ ಸಚಿವರಾಗಬೇಕಿತ್ತು:**

ಸದನದ ಹಿರಿಯ ಶಾಸಕರಾದ ಅಶೋಕ್ ಪಟ್ಟಣ್ ಅವರು ಸಚಿವರಾಗಬೇಕಿತ್ತು. ಅದು ನನ್ನ ಅಪೇಕ್ಷೆಯೂ ಆಗಿತ್ತು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಆದರೆ, ಬದ್ಧತೆಗೆ ಹೆಸರಾಗಿರುವ ಅಶೋಕ್ ಪಟ್ಟಣ್ ಅವರು, ಕಾಂಗ್ರೆಸ್ ಪಕ್ಷದ ಕಟ್ಟಾಳುವಾಗಿ ಇದ್ದಾರೆ ಎಂದರು.

ಮಹಿಳಾ ಕೋಟಾದಲ್ಲಿ ನನಗೆ ಸಚಿವೆಯಾಗುವ ಅವಕಾಶ ಲಭಿಸಿತು ಎಂದು ಹೇಳಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಈ ಚುನಾವಣೆ ಸಿದ್ದರಾಮಯ್ಯ ನೇತೃತ್ವದ ಅಭಿವೃದ್ಧಿ ಹಾಗೂ 5 ಗ್ಯಾರಂಟಿ ಯೋಜನೆಗಳ ಮೇಲೆ ನಡೆಯುತ್ತಿದೆ ಎಂದು ಹೇಳಿದರು.

ಕಳೆದ 10 ತಿಂಗಳಲ್ಲಿ ನಾವು ಕೊಟ್ಟ ಭರವಸೆಗಳನ್ನು ಈಡೇರಿಸಿದ್ದೇವೆ. ಸಿದ್ದರಾಮಯ್ಯ ನವರು ಕಳೆದ ಅವಧಿಯಲ್ಲಿ ಮುಖ್ಯಮಂತ್ರಿ ಆಗಿದ್ದ ವೇಳೆ 5 ವರ್ಷದಲ್ಲಿ 5 ಲಕ್ಷ ಮನೆಗಳನ್ನು ನಿರ್ಮಿಸಿದ್ದರು. ಬಳಿಕ ನಾಲ್ಕು ವರ್ಷಗಳ ಆಡಳಿತ ನಡೆಸಿದ ಬಿಜೆಪಿ ಬಡ ಜನರಿಗೆ ಒಂದೇ ಒಂದು ಮನೆಯನ್ನು ನಿರ್ಮಾಣ ಮಾಡಲಿಲ್ಲ ಎಂದು ಆರೋಪಿಸಿದರು.

ಗ್ಯಾರಂಟಿ ಯೋಜನೆಗಳಿಗಾಗಿ ನಮ್ಮ ಸರ್ಕಾರ ಪ್ರತಿ ವರ್ಷ 60 ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರ ಆರ್ಥಿಕ ಶಕ್ತಿ ವೃದ್ಧಿಸಿದ್ದು, ಮಹಿಳೆಯರನ್ನು ಸಮಲೀಕರಣ ಮಾಡುವುದೇ ನಮ್ಮ ಸರ್ಕಾರದ ಉದ್ದೇಶ ಎಂದು ಹೇಳಿದರು.

ಚಿಕ್ಕೋಡಿ ಹಾಗೂ ಬೆಳಗಾವಿ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು. ಮೃಣಾಲ್ ಹೆಬ್ಬಾಳ್ಕರ್ ಇನ್ನೂ ಯುವಕ, ನಮ್ಮ ಜಿಲ್ಲೆಯ ಭವಿಷ್ಯದ ನಾಯಕ ಎಂದು ಹೇಳಿದರು.

ಬೆಳಗಾವಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆದ್ದು ಬಹಳ ವರ್ಷಗಳಾಗಿವೆ. ಈ ಬಾರಿ ನಮ್ಮ ಗೆಲುವಿಗೆ ಪೂರಕ ವಾತಾವರಣ ನಿರ್ಮಾಣವಾಗಿದೆ ಎಂದು ಸಚಿವರು ತಿಳಿಸಿದರು.

ತಾಯಿ ಅವರ ಮಾರ್ಗದರ್ಶನದಲ್ಲಿ ರಾಜ-ಕೀಯ ಜೀವನ ಆರಂಭಿಸಿದ್ದು, ಜನರ ಪ್ರೀತಿ ವಿಶ್ವಾಸ ನೋಡಿದ ಮೇಲೆ ಜೀವನ ಪೂರ್ತಿ ಸಮಾಜ ಸೇವೆ ಮಾಡಬೇಕು ಎಂದು ತೀರ್ಮಾನಿಸಿರುವೆ ಎಂದು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಹೇಳಿದರು.

ಅಭಿವೃದ್ಧಿಗೆ ಮತ್ತೊಂದು ಹೆಸರೇ ಅಶೋಕ್ ಪಟ್ಟಣ್ ಅವರು, ಅವರೇ ನನಗೆ ಸ್ಫೂರ್ತಿ. ಅವರ ಮಾರ್ಗದರ್ಶನದಲ್ಲಿ ಮುಂದುವ-ರಿಯುವೆ ಎಂದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಸಂಘಟನಾ ಚತುರ ಅಶೋಕ್ ಪಟ್ಟಣ್ ಅವರ ನೇತೃತ್ವದಲ್ಲಿ ರಾಮದುರ್ಗ ಕ್ಷೇತ್ರದಿಂದ 30 ಸಾವಿರ ಮತಗಳ ಲೀಡ್ ನಿರೀಕ್ಷೆ ಇಡಲಾಗಿದೆ. 8 ಕ್ಷೇತ್ರಗಳ ಪೈಕಿ 5 ಜನ ಕಾಂಗ್ರೆಸ್ ಶಾಸಕರಿದ್ದು, ಈ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಹೆಚ್ಚು ಮುನ್ನಡೆ ಸಿಗುವ ವಿಶ್ವಾಸವಿದೆ ಎಂದರು. ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಳಗಾವಿಗೆ ಪ್ರಚಾರಕ್ಕೆ ಬರುವರು ಎಂದು ತಿಳಿಸಿದರು.

ಅಶೋಕ್ ಪಟ್ಟಣ್ ನೇತೃತ್ವದಲ್ಲಿ ಬೆಳಗಾವಿ ಜಿಲ್ಲಾ ನಾಯಕರು ತೆಗೆದುಕೊಂಡ ನಿರ್ಧಾರದಿಂದ ಬೆಳಗಾವಿಗೆ ಮೃಣಾಲ್ ಹೆಬ್ಬಾಳ್ಕರ್, ಚಿಕ್ಕೋಡಿಗೆ ಪ್ರಿಯಾಂಕಾಗೆ ಟಿಕೆಟ್ ನೀಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಶಾಸಕರೂ, ಸರ್ಕಾರದ ಮುಖ್ಯ ಸಚೇತಕರೂ ಆಗಿರುವ ಅಶೋಕ್ ಪಟ್ಟಣ್ ಮಾತನಾಡಿ, ಮೃಣಾಲ್ ಹೆಬ್ಬಾಳಕರ್ ಅವರನ್ನು ಅತ್ಯಧಿಕ ಬಹುಮತದಿಂದ ಆಯ್ಕೆ ಮಾಡುವಂತೆ ಮನವಿ ಮಾಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ, ಜಹೂರ್ ಹಾಜಿ, ಸುರೇಶ ಪತ್ತೆಪೂರ್, ರಾಯಪ್ಪ ಕತ್ತಿ, ಜೆ.ಬಿ.ರಂಗನಗೌಡ್ರ, ಸೋಮಶೇಖ ಸಿದ್ಲಿಂಗಪ್ಪನವರ, ರಾಜೇಶ್ವರಿ ಮೆಟಗುಡ್, ಗಾಯಿತ್ರಿ ದೇವಾಂಗಮಠ್, ಮಂಜುಳಾ ದೇವರೆಡ್ಡಿ, ಚಿದಾನಂದ ದೊಡಮನಿ, ದುರಗಪ್ಪ ಮೂಲಿಮನಿ, ಹಜರತಸಾಬ್ ಪೈಲವಾನ್, ಪ್ರಕಾಶ ತಳವಾರ, ರಮೇಶ್ ಅಣ್ಣಿಗೇರಿ, ನಿಂಗಪ್ಪ ದಂಡಿನದರ್ಗಿ, ಪರಸಪ್ಪ ಜಂಗವಾಡ, ಚಿನ್ನಪ್ಪ ಮುದೆನೂರ್, ಬಸನಗೌಡ ಪ್ಯಾಟಿಗೌಡರ್, ರಾಮಣ್ಣ ಬಿಡಕಿ, ಕೃಷ್ಣಗೌಡ ಪಾಟೀಲ, ವಿಜಯಕುಮಾರ ರಾಠೋಡ್, ಕೆ.ಎಚ್. ಮುಮ್ಮರೆಡ್ಡಿ ಉಪಸ್ಥಿತ-ರಿದ್ದರು.

# ವ್ಯಕ್ತಿ ನಾಪತ್ತೆ

ಬೆಳಗಾವಿ: ಬೆಳಗಾವಿಯ ಖಾಸಬಾಗ ಓಂ ನಗರದ ರವಿಕುಮಾರ ಚನ್ನಪ್ಪ ಕಲ್ಲಪ್ಪನವರ (36) ಅವರು ಮಾ.2 ರಂದು ಮುಂಜಾನೆ 8.30 ಸುಮಾರಿಗೆ ಮನೆಯಿಂದ ಎಲ್ಲಿಯೋ ಹೋಗಿ ಮರಳಿ ಮನೆಗೆ ಬಾರದೆ ಕಾಣೆಯಾಗಿರುತ್ತಾನೆ ಎಂದು ಪತ್ನಿ ಲಕ್ಷ್ಮೀ ರವಿಕುಮಾರ ಕಲ್ಲಪ್ಪನವರ ಅವರು ಶಹಾಪೂರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿ ವಿವರ: 5 ಫೂಟ್ 6 ಇಂಚ ಇದ್ದು, ಬೂದು ಬಣ್ಣದ ಟಿ-ಶರ್ಟ್, ಕಪ್ಪು ಬಣ್ಣದ ಜಿನ್ಸ್ ಪ್ಯಾಂಟ್ ಧರಿಸಿರುತ್ತಾರೆ. ದುಂಡು ಮುಖ, ಉದ್ದ ಮೂಗು, ಸದೃಢ ಮೈಕಟ್ಟು, ಗೋಧಿಗೆಂಪು ಮೈಬಣ್ಣ ಹೊಂದಿರುತ್ತಾನೆ.

ಸದರಿ ಕಾಣೆಯಾದ ವ್ಯಕ್ತಿಯುವು ಬಗ್ಗೆ ಮಾಹಿತಿ ಸಿಕ್ಕಲ್ಲಿ ಬೆಳಗಾವಿ ನಗರದ ಪೊಲೀಸ್ ಕಂಟ್ರೋಲ್ ರೂಮ್ ನಂ.08312405233, ಶಹಾಪೂರ ಪೊಲೀಸ್ ಠಾಣೆ ದೂರವಾಣಿ:08312405244 ಅಥ-ವಾ ಪೊಲೀಸ್ ಇನ್ಸ್‌ಪೆಕ್ಟರ್ ದೂರವಾಣಿ: 9480804046 ಸಂಖ್ಯೆಗೆ ಸಂಪರ್ಕಿಸಲು ಶಹಾಪೂರ ಪೊಲೀಸ್ ಠಾಣೆಯ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸವದತ್ತಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ನೊಂದಾಯಿತ ಆಸ್ತಿ ಕಬ್ಜಾ ಪಡೆದುಕೊಳ್ಳಲು ನ್ಯಾಯಾಲಯ ಆದೇಶ

ಬೆಳಗಾವಿ: ಶಂಕ್ರೆವ್ವ ಕೋಂ ತಿಪ್ಪಣ್ಣ ಕುರ್ಲಗಿರಿ, ಉರ್ಫ ರಾಮಪ್ಪನವರ ಇವರು ಧಾರವಾಡ ಜಿಲ್ಲಾ ಹುಬ್ಬಳ್ಳಿ ಶಹರದ ವಾರ್ಡ ಬಡಾವಣೆಯ ತಮ್ಮ ಆಸ್ತಿಗಳಾದ ಸಿ.ಟಿ.ಎಸ್ ನಂ.3524ರ ಸಿ.ಟಿ.ಎಸ್ ಕ್ಷೇತ್ರ 205.1/9 ಚ.ಯಾರ್ಡ ಮತ್ತು ಧಾರವಾಡ ಜಿಲ್ಲಾ ಹುಬ್ಬಳ್ಳಿ ನಗರ ತಾಲೂಕ ಪೈಕಿ ನಾಗಶೆಟ್ಟಿಕೊಪ್ಪ ಗ್ರಾಮದ ಬ್ಲಾಕ ನಂ.22/1 ಕ್ಷೇತ್ರ 1 ಎಕರೆ 20 ಗುಂಟೆ ನೇದ್ದವುಗಳ ಕುರಿತು ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಯಲ್ಲಮ್ಮನ ಗುಡ್ಡ ಸವದತ್ತಿ ಇವರ ಹೆಸರಿನಲ್ಲಿ ನೊಂದಾಯಿತ ಮೃತ್ಯು ಪತ್ರವನ್ನು ನರಗುಂದ ಸಬ್ ರಜಿಸ್ಟರ್ ಕಛೇರಿಯಲ್ಲಿ 2010ರ ಫೆಬ್ರವರಿ 13 ರಂದು ನೊಂದಾಯಿಸಿ ಇಟ್ಟಿರುತ್ತಾರೆ.

ನಂತರ ಸದರಿ ಮೃತ್ಯು ಪತ್ರವನ್ನು 2016ರ ಎಫ್ರಿಲ್ 2 ರಂದು ಖುದ್ದಾಗಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ಬಂದು ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ನೀಡಿರುತ್ತಾರೆ.

ಶಂಕ್ರೆವ್ವಳು 2017ರ ಫೆಬ್ರವರಿ 15 ರಂದು ಮರಣ ಹೊಂದಿದ ನಂತರ ಅವಳ ಮಲಮಗನ ಹೆಂಡತಿ ರೇಣುಕಾ ಯಲ್ಲಪ್ಪ ಕುರ್ಲಗಿರಿ ಅವರು ಖೊಟ್ಟಿ ಮೃತ್ಯು ಪತ್ರವನ್ನು ಸೃಷ್ಟಿಸಿಕೊಂಡು ಸಿ.ಟಿ.ಎಸ್ ದಾಖಲೆಗಳಲ್ಲಿ ತಮ್ಮ ಹೆಸರುಗಳನ್ನು ದಾಖಲಿಸಿಕೊಂಡಿರುತ್ತಾರೆ.

ಈ ಮೇಲ್ಕಂಡ ವಿಷಯವನ್ನು ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ, ಯಲ್ಲಮ್ಮನಗುಡ್ಡ, ತಾಲೂಕ ಸವದತ್ತಿ ಜಿಲ್ಲಾ ಬೆಳಗಾವಿ ಅವರು ದೇವಸ್ಥಾನದ ಆಸ್ತಿಯನ್ನು ಕಬಳಿಸುವ ಹುನ್ನಾರ ಮಾಡತ್ತಿರುವವರನ್ನು ಮನ ಗಂಡು ಅಲ್ಲಿಯ ಸುತ್ತಮುತ್ತಲಿನ ಭಕ್ತರು ಸರ್ಕಾರಕ್ಕೆ ಪತ್ರ ಬರೆದಿದ್ದು, ತದನಂತರ ಸರ್ಕಾರವು ಸದರಿ ವಿಷಯಕ್ಕೆ ಸಂಬಂಧಪಟ್ಟಂತೆ ಮಾನ್ಯ ಜಿಲ್ಲಾಧಿಕಾರಿಗಳು, ಬೆಳಗಾವಿ ಇವರಿಗೆ ಪತ್ರ ಬರೆದು ಮೃತ್ಯು ಪತ್ರವನ್ನು ಊರ್ಜಿತಗೊಳಿಸಲು ಅನುಭವಿಕ ವಕೀಲರನ್ನು ನೇಮಿಸಿಕೊಳ್ಳಲು ಆದ-ೀಶಿಸಿರುತ್ತಾರೆ.

ಸರ್ಕಾರದ ಆದೇಶದ ಪ್ರಕಾರ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಯಾದ ಎಸ್.ಸಿ.ಕೊಟಾರಗಸ್ತಿ ಅವರು 1ನೇ ಅಧಿಕ ಹಿರಿಯ ದಿವಾಣಿ ನ್ಯಾಯಾಧೀಶರು, ಹುಬ್ಬಳ್ಳಿ ಇವರ ನ್ಯಾಯಾಲಯದಲ್ಲಿ ಅಸಲ ದಾವೆ ಓ.ಎಸ್ ನಂ.329/2018 ನೇದ್ದನ್ನು ದಾಖಲಿಸಿದ್ದು, ಅದೇ ರೀತಿ ದಿ: ಶಂಕ್ರೆವ್ವಳ ಸೊಸೆ ರೇಣುಕಾ ಯಲ್ಲಪ್ಪ ಕುರ್ಲಗಿರಿ ಇವರು ಸಹ ಅಸಲು ದಾವೆ ಓ.ಎಸ್ ನಂ.23/2019 ನೇದ್ದನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯದವರು ಎರಡು ಪ್ರಕರಣಗಳನ್ನು ಒಟ್ಟುಗೂಡಿಸಿ ದೇವಸ್ಥಾನದ ಪರವಾಗಿ ಆರ್.ಎಸ್.ಹೆಗಡೆ ವಕೀಲರು ಹುಬ್ಬಳ್ಳಿ ಇವರು ವಾದ ಮಂಡಿಸಿದ್ದು, ವಿಲ್ ಸಲ್ಲಿಸಿದ ಸಮಯದಲ್ಲಿ ಎ.ಎಸ್.ಗ್ರಾಮೋಪಾದ್ಯ ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಪ್ರಕರಣ ದಾಖಲಸುವ ಸಮಯದಲ್ಲಿದ್ದ ಎಸ್.ಸಿ.ಕೊಟಾರಗಸ್ತಿ ಕಾರ್ಯನಿರ್ವಾಹಕ ಅಧಿಕಾರಿ ಅವರುಗಳ ಸಾಕ್ಷಿ ಹೇಳಿಕೆ ಮತ್ತು ಎಲ್ಲ ಸಾಕ್ಷಾಧಾರಗಳನ್ನು ಪರಿಗಣಿಸಿದ್ದು, ಅದೇ ರೀತಿ ದೇವಾಲಯದ ಸಿಬ್ಬಂದಿಯವರು ಪ್ರಕರಣದ ಎಲ್ಲ ದಾಖಲೆಗಳನ್ನು ಒದಗಿಸಿದ್ದು ಇರುತ್ತದೆ.

2024ರ ಮಾರ್ಚ್ 12 ರಂದು ಅಸಲ ದಾವೆ ಓ.ಎಸ್ ನಂ.23/2019 ನೇದ್ದನ್ನು ಖರ್ಚು ಸಹಿತ ವಜಾಗೊಳಿಸಿ, ಅಸಲ ದಾವೆ ಓ.ಎಸ್ ನಂ.329/2018 ನೇದ್ದನ್ನು ಖರ್ಚು ಸಹಿತ ಪುರಸ್ಕರಿಸಿ ದಿ:ಶಂಕ್ರೆವ್ವ ತಿಪ್ಪಣ್ಣ ಕುರ್ಲಗಿರಿ ಇವರು ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದ ಹೆಸರಿಗೆ 2010ರ ಏಪ್ರಿಲ್ 13 ರಂದು ನೊಂದಾಯಿಸಿದ್ದ ಮೃತ್ಯು ಪತ್ರವು ಕಾನೂನು ಬದ್ಧವಾಗಿ ಉರ್ಜಿತವೆಂದು ಆದೇಶಿಸಿರುತ್ತಾರೆ.

ದೇವಸ್ಥಾನದವರು ಸದರಿ ಆಸ್ತಿಗಳ ಕಬ್ಜಾವನ್ನು ಪಡೆದುಕೊಳ್ಳಲು ಮಾನ್ಯ ನ್ಯಾಯಾಲಯವು ನಿರ್ದೇಶಿಸಿರುತ್ತಾರೆ ಎಂದು ಯಲ್ಲಮ್ಮನಗುಡ್ಡದ ರೇಣುಕಾ ಯಲ್ಲಮ್ಮ ದೇವಸ್ಥಾನದ ಕಾರ್ಯ ನಿರ್ವಾಹಕಾಧೀಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ವತೋಮುಖದ ಅಭಿವೃದ್ಧಿಗಾಗಿ ಕೈ ಪಕ್ಷ ಬೆಂಬಲಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಸರ್ವತೋಮುಖದ ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲು ಪ್ರತಿಯೊಬ್ಬರು ಮುಂದಾಗಬೇಕು ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣೆ ಪ್ರಯುಕ್ತ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹುದಲಿ ಜಿಲ್ಲಾಪಂ ವ್ಯಾಪ್ತಿಯ ಚಂದಗಡ ಗ್ರಾಮದಲ್ಲಿ ಹಮ್ಮಿಕೊಳ್ಳಲಾದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿ, ನಾನು ಕಳೆದ 4-5 ವರ್ಷಗಳಿಂದ ಸಮಾಜಮುಖಿ ಕಾರ್ಯಗಳಲ್ಲಿ ಸ್ವಯಂ



ಪ್ರೇರಿತರಾಗಿ ತೊಡಗಿಸಿಕೊಂಡಿದ್ದು, ತಾವೆಲ್ಲರೂ ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ಮೂಲಕ ನನ್ನನ್ನು ಲೋಕಸಭೆಗೆ ಆಯ್ಕೆ ಮಾಡಿರಿ ಎಂದು ಮನಪೂರ್ವಕವಾಗಿ ಕಾರ್ಯಕರ್ತರಲ್ಲಿ ಕೇಳಿಕೊಂಡರು.

ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನಗೆ ಮತದಾರರು ಮತ ನೀಡುವಂತೆ ಕೈ ಕಾರ್ಯಕರ್ತರು ಕಾಂಗ್ರೆಸ್ ಜಾರಿಗೆ ತಂದ ಯೋಜನೆಗಳನ್ನು ಮನೆ ಮನೆಗೆ ತಿಳಿಸಬೇಕು.

ಸಚಿವರಾದ ನಮ್ಮ ತಂದೆಯವರಾದ ಸತೀಶ್ ಜಾರಕಿಹೊಳಿ ಅವರನ್ನು ಹಾಗೂ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಮೂಲಕ ಚಿಕ್ಕೋಡಿ ಲೋಕಸಭೆಯ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಹಾಗೂ ಸುವರ್ಣ ಚಿಕ್ಕೋಡಿ ಕನಸು ನನಸು ಮಾಡಲಾಗುವುದು ಎಂದರು.

ಈ ವೇಳೆಸಚಿವರ ಆಪ್ತ ಸಹಾಯಕರಾದ ಅರವಿಂದ ಕಾರ್ಚಿ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಮುಖಂಡರ ಕೊಡುಗೆ ಅಪಾರ. ಸಾಮಾಜಿಕ ನ್ಯಾಯ ಕೊಡುವಲ್ಲಿ ಕಾಂಗ್ರೆಸ್ ಪಕ್ಷ ದ ಪಾತ್ರ ಮುಖ್ಯ ಪಾತ್ರ ವಹಿಸಿದೆ. ಇಂದಿನ ನಿರುದ್ಯೋಗ ಹೆಚ್ಚಳಕ್ಕೆ ಬಿಜೆಪಿಯೇ ಕಾರಣ. ಅಚ್ಛೆ ದಿನ್ ಬರುತ್ತವೆ ಎಂದು ಹೇಳಿರುವ ಬಿಜೆಪಿ, 10 ವರ್ಷ ಗತಿಸಿದರೂ ಯಾವುದೇ ಅಚ್ಛೆ ದ್ದಿನ್ ತರಲಿಲ್ಲ. ಕಾಂಗ್ರೆಸ್ ಕಾರ್ಯಕರ್ತರು ಅಭಿವೃದ್ಧಿ ಹಾಗೂ ಪಕ್ಷ ದ ತತ್ವ ಸಿದ್ಧಾಂತಗಳನ್ನು ಜನರಿಗೆ ಮುಟ್ಟಿಸುವ ಮೂಲಕ ಬೂತ ಮಟ್ಟದಿಂದ ಪಕ್ಷ ಸಂಗಟಿಸಲು ಕಾರ್ಯಕರ್ತರು ಸಿದ್ದರಾಗಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕ ಅರವಿಂದ ಕಾರ್ಚಿ ಹಾಗೂ ಚಂದಗಡ ಗ್ರಾಮದ ಹಿರಿಯ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಇಂದು ವಿದ್ಯಾರ್ಥಿಗಳ ಚಿತ್ರಕಲಾ ಪ್ರದರ್ಶನ

ಬೆಳಗಾವಿ: ಕಲಾ ಮಾಲಾ ಫೌಂಡೇಶನ್ ಆರ್ಟ್ ಅಂಡ್ ಕಲ್ಚರ್ ಇವರು 2024 ನೇ ಸಾಲಿನ ಆರ್ಟ್ ಗ್ರಾಂಟ್ ಪಡೆದ ಕರ್ನಾಟಕದ ದೃಶ್ಯಕಲಾ ವಿದ್ಯಾರ್ಥಿಗಳ ಕಲಾ ಪ್ರದರ್ಶನ ಹಾಗೂ ಗ್ರಾಂಟ ವಿತರಣೆ ಸಮಾರಂಭವನ್ನು ಇದೇ ದಿ. 4 ಗುರುವಾರದಂದು ಸಾಯಂಕಾಲ 4 ಗಂಟೆಗೆ ಬೆಳಗಾವಿಯ ತಿಲಕವಾಡಿ ಹೆರವಾಡಕರ್ ಸ್ಕೂಲ್ ಹತ್ತಿರವಿರುವ ಕಲಾ ಮಹರ್ಷಿ ಶ್ರೀ ಕೆ ಬಿ ಕುಲಕರ್ಣಿ ಆರ್ಟ್ ಗ್ಯಾಲರಿ (ವರೆರಕರ ನಾಟ್ಯ ಮಂದಿರದಲ್ಲಿ) ಹಮ್ಮಿಕೊಂಡಿದ್ದಾರೆ.

ಕಲಾವಿದರಾದ ರಾಯಭಾಗದ ಬಾಬುರಾವ್ ನಡೋಣಿಯವರು ಉದ್ಘಾಟಿಸಲಿದ್ದು ಮುಖ್ಯ ಅತಿಥಿಗಳಾಗಿ ದಖನಿ ಡೈರಿಜದ ವ್ಯವಸ್ಥಾಪಕ ನಿರ್ದೇಶಕರಾದ ಗೋಪಿಕೃಷ್ಣ ಗೌರವ ಅತಿಥಿಗಳಾಗಿ ಸರ್ವ ಸಮರ್ಥ ಕೋ ಆಪರೇಟಿವ್ ದ ಅಧ್ಯಕ್ಷರಾದ ಸೋಮಶೇಖರ ತೇರದಾಳ, ಹಿಂದು ಪತ್ರಿಕೆಯ ಹಿರಿಯ ವರದಿಗಾರರಾದ ಋಷಿಕೇಶ ಬಹದ್ದೂರ್ ದೇಸಾಯಿ ಮತ್ತು ಖ್ಯಾತ ಚಿತ್ರ ಕಲಾವಿದರಾದ ಬೆಳಗಾವಿಯ ದಿಲೀಪಕುಮಾರ್ ಕಾಳೆ ಇವರು ಆಗಮಿಸಲಿದ್ದಾರೆ.

ಕರ್ನಾಟಕ ಲಲಿತಕಲಾ ಅಕಾಡೆಮಿ ಸದಸ್ಯರಾದ ಶ್ರೀಮತಿ ಆಶಾರಾಣಿ ನಡೋನಿ ಇವರನ್ನು ಸನ್ಮಾನಿಸಲಿದ್ದು ಕರ್ನಾಟಕ ಸಂಗೀತ ಖ್ಯಾತ ಕಲಾವಿದರಾದ ಶ್ರೀಮತಿ ಪದ್ಮ ಸತ್ಯನಾರಾಯಣ ಇವರಿಂದ ಸಂಗೀತ ಕಾರ್ಯಕ್ರಮವಿದೆ.

ಆಸಕ್ತರು ಈ ಕಾರ್ಯಕ್ರಮದ ಸದುಪಯೋಗ ಪಡೆಯುವಂತೆ ಗಣೇಶ್ ದೊಡಮನಿ (ಮೊ 9845875261) ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಲೋಕಸಭಾ ಚುನಾವಣಾ ಪ್ರಯುಕ್ತ ರಂಗೋಲಿ ಸ್ಪರ್ಧೆ



ಬೆಳಗಾವಿ: ತಾಲ್ಲೂಕಿನ ಸಾಂಬ್ರಾ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ಗ್ರಾಮ ಪಂಚಾಯತಿ ವತಿಯಿಂದ ಬುಧವಾರ ಎಪ್ರಿಲ್.3 ರಂದು ಲೋಕಸಭಾ ಚುನಾವಣಾ ಅಂಗವಾಗಿ ರಂಗೋಲಿ ಸ್ಪರ್ಧೆ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮರಡ್ಡಿ ಪಾಟೀಲ್, ಸಹಾಯಕ ನಿರ್ದೇಶಕರಾದ (ಪ.ರಾ)ಗಣೇಶ ಕೆ.ಎಸ್. ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಗೂ ಇತರರು ಇದ್ದರು.

# ಚಿಕ್ಕೋಡಿ: ಫಲಕ ಹರಿದ ಕಾರಣ ಶಿರಗಾಂವ್‌ನಲ್ಲಿ ಉದ್ವಿಗ್ನ ಸ್ಥಿತಿ



ಚಿಕ್ಕೋಡಿ: ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಜಯಂತಿ ನಿಮಿತ್ತ ನಿರ್ಮಿಸಿದ್ದ ಶಿರಗಾಂವದಲ್ಲಿ ಫಲಕ ಹರಿದಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ದಲಿತ ಸಮುದಾಯದವರು ಬೀದಿಗಿಳಿದಿದ್ದಾರೆ. ನಾಲ್ಕು ಗಂಟೆಗಳ ಕಾಲ ರಸ್ತೆ ತಡೆದರು. ರಾತ್ರಿ ಪೊಲೀಸರು ಈ ಬಗ್ಗೆ ತನಿಖೆ ನಡೆಸಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರಿಂದ ಪ್ರತಿಭಟನೆ ಕೈಬಿಡಲಾಯಿತು.

ಸೋಮವಾರ ರಾತ್ರಿ ಅಂಬೇಡ್ಕರ್ ಜನ್ಮ ದಿನಾಚರಣೆಯ ಫಲಕ ಹಾಕಲಾಯಿತು. ಮಂಗಳವಾರ ಮಧ್ಯಾಹ್ನ ಫಲಕ ಹರಿದಿರುವುದು ಕಂಡು ಬಂದಿದೆ. ಆ ಬಳಿಕ ದಲಿತ ಸಂಘಟನೆ ಯುವಕರು ಮತ್ತು ಸಮಾಜ ಬೀದಿಗಿಳಿದು ಪ್ರತಿಭಟನೆ ಆರಂಭಿಸಿದರು. ಈ ಹೋರ್ಡಿಂಗ್‌ಗಳನ್ನು ಹರಿದು ಹಾಕಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಚಿಕ್ಕೋಡಿ-ಶಿರಗಾಂವ ರಸ್ತೆ ತಡೆ ನಡೆಸಿದರು. ಈ ವೇಳೆ ಯುವಕರು ಟೈರ್ ಸುಟ್ಟು ಪ್ರತಿಭಟನೆ ನಡೆಸಿದರು. ಘಟನೆಯ ಮಾಹಿತಿ ತಿಳಿದ ತಕ್ಷಣ ಆಡಳಿತಾಧಿಕಾರಿಗಳು ಮತ್ತು ಪೊಲೀಸರು ದೌಡಾಯಿಸಿದರು. ಜನ ಕೇಳದ ಕಾರಣ ಹಿರಿಯ ಅಧಿಕಾರಿಗಳು ಒಳ ಪ್ರವೇಶಿಸಿದರು. ಈ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಬಳಿಕ ತಡರಾತ್ರಿ ಧರಣಿ ಹಿಂಪಡೆಯಲಾಯಿತು. ಮೆಹಬೂಬಿ, ಉಪ ಪೊಲೀಸ್ ವರಿಷ್ಠಾಧಿಕಾರಿ ಗೋಪಾಲಕೃಷ್ಣಗೌಡರ್, ತಹಸೀಲ್ದಾರ್ ಸಿ. ಎಸ್. ಕುಲಕರ್ಣಿ, ಚಿಕ್ಕೋಡಿ, ನಿಪಾನಿ ವೃತ್ತದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್ ಮತ್ತು ಪೊಲೀಸ್ ಸಿಬ್ಬಂದಿ ಇದ್ದರು. ಈ ಬಗ್ಗೆ ಅಧಿಕಾರಿಗಳಿಗೆ ದೂರು ನೀಡಲಾಗಿದೆ.

# ಸಹೋದರಿ ಪ್ರಿಯಂಕಾ ಪರ ಯುವ ನಾಯಕ ರಾಹುಲ್ ಜಾರಕಿಹೊಳಿ ಅಬ್ಬರ ಪ್ರಚಾರ



ಬೆಳಗಾವಿ: ಚಿಕ್ಕೋಡಿ ಉಜ್ವಲ ಭವಿಷ್ಯಕ್ಕಾಗಿ ಈ ಲೋಕಸಭೆಯ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ ಯುವ ನಾಯಕ ರಾಹುಲ್ ಜಾರಕಿಹೊಳಿ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ರಾಯಬಾಗ ತಾಲೂಕಿನ ಹಳ್ಳದಹರಿತೋಟ ಹಾಗೂ ಆಣೆಭಾವಿಕೋಡಿ ಗ್ರಾಮದಲ್ಲಿ ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸಹೋದರಿ ಪ್ರಿಯಾಂಕಾ ಜಾರಕಿಹೊಳಿ ಅವರ ಪರ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಸತೀಶ ಜಾರಕಿಹೊಳಿ ಫೌಂಡೇಶನ್ ಮೂಲಕ ಯಾವುದೇ ಭೇದಭಾವ ಇಲ್ಲದೇ ಪ್ರತಿಭಾವಂತ ಕ್ರೀಡಾಪಟುಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುತ್ತ ಅವರಿಗೆ ಮನೋ ಸ್ಥೈರ್ಯ ತುಂಬಿದ್ದಾರೆ.

ವಯಸ್ಸಿನಲ್ಲಿ ಚಿಕ್ಕವರಿದ್ದರು ಸಮಾಜ ಸೇವೆಯಲ್ಲಿ ಅವರ ಕೀರ್ತಿ ದೊಡ್ಡದಾಗಿದೆ. ಹೀಗಾಗಿ ಅವರನ್ನು ಆಯ್ಕೆ ಮಾಡುವ ಮೂಲಕ ಚಿಕ್ಕೋಡಿ ಸಮಗ್ರ ಅಭಿವೃದ್ಧಿಗೆ ಸಹಕರಿಸಬೇಕು ಎಂದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರ ವಿಶೇಷ ಜನಪರ ಕಾರ್ಯಕ್ರಮಗಳೊಂದಿಗೆ ಅಭಿವದ್ಧಿಯ ಕ್ರಾಂತಿ ಗೆ ಮುನ್ನುಡಿ ಬರೆದಿದ್ದು, ರೈತರು, ಕೂಲಿ ಕಾರ್ಮಿಕರು, ಬಡವರು, ಮಧ್ಯಮ ವರ್ಗದವರು ಸೇ-ರಿದಂತೆ ಎಲ್ಲರೂ ನೆಮ್ಮದಿಯಿಂದ ಬದುಕು ಸಾಗಿಸಲು ಈ ಬಾರಿ ಕಾಂಗ್ರೆಸ್‌ಗೆ ಮತ ನೀಡಬೇಕು.

ಭ್ರಷ್ಟಾಚಾರ ಮುಕ್ತ ಅಧಿಕಾರ ನೀಡಲು ನಮ್ಮ ಸಹೋದರಿ ಪ್ರಿಯಾಂಕಾ ಜಾರಕಿಹೊಳಿ ಅವ-ರಿಗೆ ಒಂದು ಅವಕಾಶ ಮಾಡಿಕೊಡಬೇಕು ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರವು ಭೂ ಸುಧಾರಣೆ ಕಾಯ್ದೆ ಜಾರಿ ಮಾಡಿತು. ಬಿಜೆಪಿಯು ರೈತ ವಿರೋಧಿ ಕಾಯ್ದೆ ಜಾರಿಗೆ ತಂದು ಅನ್ಯಾಯವೆಸಗಿತು.

ಅವೈಜ್ಞಾನಿಕವಾಗಿ ನೋಟು ಅಮಾನ್ಯೀಕರಣ ಜಾರಿ ಮಾಡಿದರು. ಇದರಿಂದ ಕಪ್ಪು ಹಣ ನಿಯಂತ್ರಿಸಲಾಗಿಲ್ಲ. ಬೆಲೆ ಏರಿಕೆಯಿಂದ ಜನರ ಕೈಯಲ್ಲಿ ಹಣವೇ ಇಲ್ಲದಂತಾಗಿದೆ. ನಿರುದ್ಯೋಗ ಪ್ರಮಾಣ ಹೆಚ್ಚಾಗಿ ಯುವಕರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದರು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಬೆಳಗಾವಿ: ಪೋಕ್ಸೋ ಪ್ರಕರಣ ಆರೋಪಿಗೆ ಚಪ್ಪಲಿ ಹಾರ ಹಾಕಿ ಮೆರವಣಿಗೆ



ಬೆಳಗಾವಿ: ಪೋಕ್ಸೋ ಪ್ರಕರಣದ ಆರೋಪಿಗೆ ಚಪ್ಪಲಿ ಹಾರ ಹಾಕಿ ಗ್ರಾಮದಲ್ಲಿ ಮೆರವಣಿಗೆ ಮಾಡಿದ ಘಟನೆ ಬೆಳಗಾವಿ ಜಿಲ್ಲೆಯ ದೊಡ್ಡವಾಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಅನಿಲ್ ಮೂಕನವರ್ ಪೋಕ್ಸೋ ಪ್ರಕರಣ ಆರೋಪಿ. ಅನಿಲ್ ಮೂಕನವರ್ ಪೋಕ್ಸೋ ಪ್ರಕರಣದಲ್ಲಿ ಮೂರು ತಿಂಗಳ ಹಿಂದೆ ಜೈಲಿಗೆ ಹೋಗಿದ್ದನು. ಇದೀಗ ಮೂರು ತಿಂಗಳ ಬಳಿಕ ಜಾಮೀನಿನ ಮೇಲೆ ಹೊರಗೆ ಬಂದಿದ್ದಾನೆ. ಗ್ರಾಮಕ್ಕೆ ಬಂದ ಆರೋಪಿ ಅನಿಲ್ ಮೂಕನವರ್ಗೆ ಸಂತ್ರಸ್ತೆ ಚಪ್ಪಲಿಯಿಂದ ಹೊಡೆದಿದ್ದಾಳೆ. ಬಳಿಕ ಸಂತ್ರಸ್ತೆ ಕುಟುಂಬಸ್ಥರು ಆರೋಪಿ ಅನಿಲ್ ಮೂಕನವರ್ ಕೈಯನ್ನು ಕೈಟ್ಟಿ ಚಪ್ಪಲಿ ಹಾರ ಹಾಕಿ ಊರಲ್ಲಿ ಮೆರವಣಿಗೆ ಮಾಡಿದ್ದಾರೆ. ಆರೋಪಿ ಅನಿಲ್ ಮೂಕನವರ್ನನ್ನು ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ಮಾಡಿರುವ ವಿಡಿಯೋ ವೈರಲ್ ಆಗಿದೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089